ಸಂಪುಟ : 9 ಸಂಚಿಕೆ 31 ಪುಟ : 4 ಬೆಲೆ : 3.00 ಶುಕ್ರವಾರ ಮಾರ್ಚ 1, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 31 Pages : 4 Price : 3.00 Friday March 1 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಈ ಮೂಲಕ ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೆನೆಂದರೆ ಮಾರ್ಚ್ 01 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.


**ಸ್ಥಳಗಳ ವಿವರ :** ವಾರ್ಡ್ ನಂ. 1ರಲ್ಲಿ ಎಸ್. ಎಮ್. ಕೃಷ್ಣಾ ನಗರ, ವಾರ್ಡ್ ನಂ.33ರಲ್ಲಿಜಾಕೀರ ಹುಸೇನ ಕಾಲೋನಿ, ಕೇಶವನಗರ, ಬ್ಯಾಂಕರ್ಸ್ ಕಾಲೋನಿ, ವೀರೇಶ್ವರ ನಗರ, ಅಪಾರ್ಟ್ಮೆಂಟ್, ಭಾಗ–1, 2.,

ವಾರ್ಡ್ ನಂ. 27, 28ರಲ್ಲಿ ಸ್ಟೇಡಿಯಂ, ಸಜ್ಜನ ಕುಲಕರ್ಣಿ ಲೈನ್, ತುಪ್ಪದ ಮಾಸ್ತರ ಲೈನ್, ಕೆ ಹೆಚ್ ಪಾಟೀಲರ ಲೈನ್, ಅಕ್ಕಿಯವರ ಲೈನ್. ಮಲ್ಲಾಡದ ಅವರ ಲೈನ್, ವಾರ್ಡ್ ನಂ. 17,15ರಲ್ಲಿ ಜವಳಗಲ್ಲಿ, ಶಹಾಪೂರ ಪೇಟೆ, ಬಸವೇಶ್ವರ ಗುಡಿ ಲೈನ್, ಗಣೇಶ ಗುಡಿಯ ಭಾಗಗಳು, ಮಹೇಂದ್ರಕರ್ ಸರ್ಕಲ್, ಕೆಲವು ಉಳಿದ ಭಾಗಗಳು.

**ವಿಶೇಷ ಸೂಚನೆ :** ಪೂರೈಕೆ ಮಾಡಿದ ನೀರನ್ನು ಕಾಯಿಸಿ ಆರಿಸಿ ಕುಡಿಯಲು ಈ ಮೂಲಕ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾನೂನು, ಪ್ರವಾಸೋದ್ಯಮ ಇಲಾಖೆ ಸಚಿವರ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ



ಕಾನೂನು, ನ್ಯಾಯ ಮಾನನ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ.ಪಾಟೀಲ ಅವರ ಪ್ರವಾಸ ಇಂತಿದೆ.

ಮಾರ್ಚ್ 1 ರಂದು ಬೆಳಿಗ್ಗೆ 10.30 ಗಂಟೆಗೆ ಬೆಂಗಳೂರಿನಿಂದ ರಸ್ತೆ ಮೂಲಕ ಪ್ರಯಾಣ ಬೆಳೆಸಿ ಸಂಜೆ 4 ಗಂಟೆಗೆ ಹುಬ್ಬಳ್ಳಿಗೆ ಆಗಮಿಸುವರು. ಸಂಜೆ 4.45 ಗಂಟೆಗೆ ಹುಬ್ಬಳ್ಳಿಯ ಕೋರ್ಟ್ ಕಾಂಪ್ಲೆಕ್ಸ್ ಹತ್ತಿರದ ದುರ್ಗಾ ಮೈದಾನದ ಹತ್ತಿರ ಎಂ ಎಂ ಜೋಶಿ ನೇತ್ರ ವಿಜ್ಞಾನ ಸಂಸ್ಥೆಯ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ನಂತರ ರಾತ್ರಿ 8 ಗಂಟೆಗೆ ಹುಬ್ಬಳ್ಳಿಯಿಂದ ಗದಗ ಆಗಮಿಸಿ ವಾಸ್ತವ್ಯ ಮಾಡುವರು.

ಮಾರ್ಚ್ 2 ರಂದು ಬೆಳಿಗ್ಗೆ 10 ಗಂಟೆಗೆ ರಸ್ತೆ ಮೂಲಕ ರೋಣ ಪಟ್ಟಣಕ್ಕೆ ತೆರಳಿ ಅಲ್ಲಿ 11 ಗಂಟೆಗೆ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ಗ್ಯಾರಂಟಿ ಫಲಾನುಭವಿಗಳ ಸಮಾವೇಶದಲ್ಲಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

## ನಾಮನಿರ್ದೇಶಿತ ಸದಸ್ಯರಾಗಿ ಸಂಜಯ ದೊಡ್ಡಮನಿ ನೇಮಕ

■ ವಿಜಯಸಾಕ್ಷಿ ಸುದ್ದಿ, ರೋಣ



ರೋಣ ತಾಲೂಕಿನ ಅಕ್ರಮ–ಸಕ್ರಮ ಸಮಿತಿಯ ಸರ್ಕಾರದ ನಾಮನಿರ್ದೇಶಿತ ಸದಸ್ಯರಾಗಿ ಸಂಜಯ ದೊಡ್ಡಮನಿ ನೇಮಕವಾಗಿದ್ದಾರೆ. ಶಾಸಕ ಜಿ.ಎಸ್. ಪಾಟೀಲರು ಸಂಜಯ ದೊಡ್ಡಮನಿಯವರಿಗೆ ಆದೇಶ ಪ್ರತಿಯನ್ನು ಹಸ್ತಾಂತರಿಸಿದ್ದು, ಸರ್ಕಾರದ ಜನಪರ ಯೋಜನೆಗಳನ್ನು ಜನರಿಗೆ ಮುಟ್ಟಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿ ಎಂದು ಸೂಚಿಸಿದ್ದಾರೆ.

### ಸಂತ ಸೇವಾಲಾಲ್‌ರ 285ನೇ ಜಯಂತ್ಯುತ್ಸವ ಸಮಾರಂಭ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ


# ಸೇವಾಲಾಲರ ಚಿಂತನೆಗಳು ಮನುಕುಲಕ್ಕೆ ದೀವಿಗೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಂಬಾಣಿ ಸಮುದಾಯದ ಆರಾಧ್ಯ ದೈವ ಸದ್ಗುರು ಸಂತ ಸೇವಾಲಾಲ್ ಮಹಾರಾಜರು ಜನರಲ್ಲಿನ ಅಜ್ಞಾನ, ಅಂಧಕಾರ, ಮೂಢನಂಬಿಕೆಗಳನ್ನು ಹೋಗಲಾಡಿಸಿ ಸುಜ್ಞಾನದ ಬೆಳಕು ಮೂಡಿಸಿದ್ದಾರೆ. ಅವರ ತತ್ವಾದರ್ಶ, ಮೌಲ್ಯ, ಚಿಂತನೆಗಳು ಇಡೀ ಮನುಕುಲಕ್ಕೆ ದಾರಿದೀಪವಾಗಿವೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಗುರುವಾರ ಪಟ್ಟಣದ ಸೋಮೇಶ್ವರ ತೇರಿನ ಮನೆ ಆವರಣದಲ್ಲಿ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳ ಲಂಬಾಣಿ ಬಂಜಾರ ಸಮಾಜದಿಂದ ಹಮ್ಮಿಕೊಳ್ಳಲಾಗಿದ್ದ ಸಂತ ಸೇವಾಲಾಲ್‌ರ 285ನೇ ಜಯಂತ್ಯುತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಸಮಾಜದ ಬೆಳಕಾದ ಸೇವಾಲಾಲ್ ಮಹಾರಾಜರು ಲೋಕ ಸಂಚಾರದ ಮೂಲಕ ಜನರ ಕಷ್ಟ ಕಾರ್ಪಣ್ಯಗಳನ್ನು ದೂರಮಾಡಿ ಸಾಮಾಜದ ಶ್ರೇಯೋಭಿವೃದ್ಧಿಗಾಗಿಯೇ ಸಮರ್ಪಿಸಿಕೊಂಡವರು. ಇಂತಹ ಮಹಾತ್ಮರನ್ನು ಸದಾ ಸ್ಮರಿಸುತ್ತಾ ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಸಾಗಬೇಕಾಗಿದೆ. ಲಕ್ಷ್ಮೇಶ್ವರದಲ್ಲಿ 3 ಕೋಟಿ ರೂ ಅನುದಾನದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲು ಉಂಟಾದ ನಿವೇಶನದ ತೊಂದರೆ ಸರಿಪಡಿಸಿ ಆದಷ್ಟು ಬೇಗ ಭವನ ನಿರ್ಮಾಣ, ತಾಂಡಾಗಳಲ್ಲಿ ಶಾಲೆ, ದೇವಸ್ಥಾನ ನಿರ್ಮಾಣ, ತಾಂಡಾಗಳ ಕಂದಾಯ ಗ್ರಾಮ ಘೋಷಣೆ ಸೇರಿ ಶಿಕ್ಷಣ, ಮೂಲಭೂತ ಸೌಲಭ್ಯ ಕಲ್ಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.




ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಸಕಲ ಜೀವರಾಶಿಗಳಿಗೆ ಲೇಸನೇ ಬಯಸಿದ ಸಂತ ಶ್ರೀ ಸೇವಾಲಾಲ್‌ರ ತತ್ವ–ಸಿದ್ಧಾಂತಗಳಡಿ ಬದುಕುವ ಲಂಬಾಣಿ ಸಮಾಜದವರು ಇತರೇ ಸಮಾಜದೊಂದಿಗೆ ಅನ್ಯೋನ್ಯತೆಯಿಂದ ಧರ್ಮನಿಷ್ಠರಾಗಿ ಬಾಳಬೇಕು. ಭಾರತಮಾತೆಯ ಪುಣ್ಯಭೂಮಿಯಲ್ಲಿ ಜನಿಸಿ ಇಲ್ಲಿನ ಅನ್ನ ಉಂಡು, ನೀರು ಕುಡಿದು, ಪಾಕಿಸ್ತಾನ್ ಜಿಂದಾಬಾದ್ ಎನ್ನುವ ದೇಶದ್ರೋಹಿಗಳಿಗೆ ಧಿಕ್ಕಾರವಿರಲಿ ಎಂದು ಪ್ರಸ್ತುತ ನಡೆದಿರುವ ರಾಜಕೀಯ ವ್ಯವಸ್ಥೆಯನ್ನು ಕುಟುಕಿದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ ಮಾತನಾಡಿ, ಲಂಬಾಣಿ ಸಮಾಜ ತನ್ನದೇ ಆದ ಸಂಸ್ಕೃತಿ, ಸಂಪ್ರದಾಯ, ಉಡುಗೆ–ತೊಡುಗೆ, ಭಾಷೆಯ ಶ್ರೇಷ್ಠತೆಯಿಂದ ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಹೆಚ್ಚಿಸಿದೆ. ಶ್ರಮಿ ಜೀವಿಗಳು ಮತ್ತು ಸ್ವಾಭಿಮಾನದ ಪ್ರತೀಕವಾದ ಸಮಾಜದ ಯುವಕರು ದುಶ್ಚಟಗಳಿಂದ ದೂರವಿದ್ದು ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ, ರಾಜಕೀಯ ಕ್ಷೇತ್ರಗಳಲ್ಲಿ ಬೆಳೆಯಬೇಕು ಎಂದರು.

ಸಮಾಜದ ಮುಖಂಡರಾದ ದೀಪಕ ಲಮಾಣಿ, ರಾಮಣ್ಣ ಲಮಾಣಿ(ಶಿಗ್ಲಿ) ಮಾತನಾಡಿದರು. ಶಿಕ್ಷಕ ವೆಂಕಟೇಶ ಅರ್ಕಸಾಲಿ ಸೇವಾಲಾಲ ಮಹಾರಾಜರ ಕುರಿತು ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಗುರಪ್ಪ ಲಮಾಣಿ, ಕುಬೇರಪ್ಪ ಲಮಾಣಿ, ಈಶಪ್ಪ ಲಮಾಣಿ, ಶಿವಣ್ಣ ಲಮಾಣಿ, ದೀಪಕ ಲಮಾಣಿ, ದೇವಣ್ಣ ಲಮಾಣಿ, ಮಲ್ಲೇಶಪ್ಪ ಲಮಾಣಿ, ಟೋಪಣ್ಣ ಲಮಾಣಿ, ಜಾನು ಲಮಾಣಿ, ಪರಮೇಶ ಲಮಾಣಿ, ಪುಂಡಲೀಕ ಲಮಾಣಿ, ಶಿವಣ್ಣ ಲಮಾಣಿ, ಸೋಮಪ್ಪ ಲಮಾಣಿ, ಸರೋಜಮ್ಮ ಲಮಾಣಿ, ವಿಜಯಲಕ್ಷ್ಮೀ ಚೌವ್ಹಾಣ, ಪ್ರೇಮವ್ವ ನಾಯಕ, ಸೋಮರೆಡ್ಡಿ ಲಮಾಣಿ, ಆನಂದ ನಾಯಕ, ಟಾಕರಪ್ಪ ಮಾಳಗಿಮನಿ, ಚಂದ್ರು ಕಾರಬಾರಿ, ಸುರೇಶ ಕುಂಬಾರ, ಪಿಎಸ್‌ಐ ಈರಣ್ಣ ರಿತ್ತಿ, ತಾವರೆಪ್ಪ ಲಮಾಣಿ ಸೇರಿ ಸಮಾಜದ ಹಿರಿಯರು ಇದ್ದರು.

ಸಮಾಜದ ಅಧ್ಯಕ್ಷ ಶಿವಣ್ಣ ಲಮಾಣಿ ಸ್ವಾಗತಿಸಿದರು. ಎಂ.ಕೆ. ಲಮಾಣಿ, ಸಂತೋಷ ಲಮಾಣಿ ನಿರೂಪಿಸಿದರು.

### ಹಿರೇಬಜಾರದ ರುಕ್ಮೀಣಿ ಪಾಂಡುರಂಗ ದೇವಸ್ಥಾನದಲ್ಲಿ ಸಭಾ ಭವನ ಉದ್ಘಾಟನೆ

# ಸಮಾಜಕ್ಕೆ ಬ್ರಾಹ್ಮಣರ ಕೊಡುಗೆ ಅಪಾರ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ ಬ್ರಾಹ್ಮಣ ಸಮಾಜಕ್ಕೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡುವುದಾಗಿ ಮಾಜಿ ಸಚಿವ ಕಳಕಪ್ಪ ಬಂಡಿ ಭರವಸೆ ನೀಡಿದರು.

ಗುರುವಾರ ಪಟ್ಟಣದ ಹಿರೇಬಜಾರದ ರುಕ್ಮೀಣಿ ಪಾಂಡುರಂಗ ದೇವಸ್ಥಾನದಲ್ಲಿ ಬ್ರಾಹ್ಮಣ ಸಮಾಜ ಸೇವಾ ಸಮಿತಿಯಿಂದ ನೂತನವಾಗಿ ನಿರ್ಮಿಸಿದ ಸಭಾ ಭವನ ಉದ್ಘಾಟಿಸಿ ಅವರು ಮಾತನಾಡಿದರು.

ಬ್ರಾಹ್ಮಣ ಸಮಾಜ ಸರ್ವೇಜನಾಃ ಸುಖಿನೋ ಭವಂತು ಎಂದು ಹೇಳುವ ಸಮಾಜ. ಅಂತಹ ಸಮಾಜದಿಂದ ಸಾಮಾಜಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ. ಪ್ರತಿಯೊಂದು ಜಾತಿಯಲ್ಲಿಯೂ ಬಡವರಿದ್ದಾರೆ. ಆದರೆ, ಬ್ರಾಹ್ಮಣ ಸಮುದಾಯದಲ್ಲಿರುವ ಬಡವರು ಅದನ್ನು ತೋರ್ಪಡಿಸದೇ ಇರುವುದರಲ್ಲೇ ಸ್ವಾಭಿಮಾನದ ಬದುಕು ನಡೆಸುತ್ತಿದ್ದು, ಅವರ ಆರ್ಥಿಕ ಸ್ಥಿತಿಯನ್ನು ಸರ್ಕಾರ ದೃಷ್ಟಿಯಲ್ಲಿಟ್ಟುಕೊಂಡು ಕಾನೂನು, ಕಾಯ್ದೆ ಸೌಲಭ್ಯಗಳ ವಿಚಾರದಲ್ಲಿ ಕೆಲವೊಂದು ಮಾರ್ಪಾಡು ಮಾಡಬೇಕಿದೆ ಎಂದರು.




ಈ ವೇಳೆ ವಿವಿಧ ಗಣ್ಯರಿಗೆ ಬ್ರಾಹ್ಮಣ ಸಮಾಜ ಸೇವಾ ಸಮಿತಿಯಿಂದ ಸನ್ಮಾನಿಸಿದ ಬಳಿಕ ಮಾಜಿ ಸಚಿವರಿಗೆ ಸಮಾಜದಿಂದ ಮನವಿ ನೀಡಲಾಯಿತು.

ಸುಧಾಕರ ಕುಲಕರ್ಣಿ, ಕೃಷ್ಣಾಚಾರ್ಯ ಇಟಗಿ, ಅಶೋಕ ತಾಸಿನ, ಕಲ್ಲಿನಾಥಶಾಸ್ತ್ರೀ ಜೀರೆ, ಪ್ರಸಾದ ಕೆರಕಲಮಟ್ಟಿ, ಸುರೇಶ ಪೂಜಾರ, ವಾಸು ಕುಲಕರ್ಣಿ, ಭಾಸ್ಕರ ರಾಯಬಾಗಿ, ಸಂಜೀವ ಜೋಶಿ, ಶಿವಾನಂದ ಮಠದ, ಅಶೋಕ ವನ್ನಾಲ, ಭದರಿನಾಥ ಜೋಶಿ, ಶ್ರೀನಿವಾಸ ತೈಲಂಗ್, ರವಿ ಕುಲಕರ್ಣಿ, ಸಮಾಜದ ಮಹಿಳಾ ಮಂಡಲದ ಅಧ್ಯಕ್ಷೆ ಶಾರದಾ ತಾಸಿನ, ಶ್ರೀಮತಿ ಕುಲಕರ್ಣಿ, ರಾಧಾ ಇಟಗಿ, ಸಂಧ್ಯಾ ಕುಲಕರ್ಣಿ ಸೇರಿದಂತೆ ಇತರರು ಇದ್ದರು.

ಸಮಾಜದ ಅಧ್ಯಕ್ಷ ರಾಮಚಂದ್ರ ಗಾಡಗೋಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮಕ್ಕೂ ಮುನ್ನ ದೇವಸ್ಥಾನದಲ್ಲಿ ರಘುನಾಥಭಟ್ಟ ತಾಸಿನ ಹಾಗೂ ಕೆ.ಸತ್ಯನಾರಾಯಣಭಟ್ಟ ಅವರಿಂದ ಲಕ್ಷ್ಮೀ ಸಹಿತ ಸತ್ಯನಾರಾಯಣ ಪೂಜೆ ಹಾಗೂ ರುಕ್ಮಿಣಿ ಪಾಂಡುರಂಗ, ಮಾರುತಿ ದೇವರಿಗೆ ವಿಶೇಷ ಪೂಜೆ ನಡೆಯಿತು. ಬಳಿಕ ಸಮಾಜದಿಂದ ಮಹಾಪ್ರಸಾದ ನಡೆಯಿತು.

## ಜಿಲ್ಲಾ ಬಿಜೆಪಿ ಯುವ ಮೋರ್ಚಾ ವತಿಯಿಂದ ಪ್ರತಿಭಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿಯ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ರಾಜ್ಯಸಭೆ ಚುನಾವಣೆಯಲ್ಲಿ ನೂತನವಾಗಿ ಆಯ್ಕೆಗೊಂಡ ಕಾಂಗ್ರೆಸ್‌ನ ನಾಸಿರ್ ಹುಸೇನ್ ವಿಧಾನಸಭೆಯಲ್ಲಿ ಸಂಭ್ರಮಿಸುತ್ತಿರುವಾಗ ಅವರ ಬೆಂಬಲಿಗರು 'ಪಾಕಿಸ್ತಾನ ಜಿಂದಾಬಾದ್' ಎಂದು ಘೋಷಣೆ ಕೂಗಿದ್ದು, ಕಾಂಗ್ರೆಸ್ ಆಡಳಿತ ಬಂದಾಗಿನಿಂದ ದೇಶದ್ರೋಹದ ಕೃತ್ಯಗಳನ್ನು ಎಸಗುತ್ತಾ ರಾಷ್ಟ್ರೀಯತೆಗೆ ಧಕ್ಕೆ ತರುವ ಕೆಲಸ ಮಾಡುತ್ತಿದೆ ಎಂದು ಆಪಾದಿಸಿ, ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ವತಿಯಿಂದ ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ದೇಶ ವಿರೋಧಿ ಚಟುವಟಿಕೆಗಳಿಗೆ ಕುಮ್ಮಕ್ಕನ್ನು ನೀಡುತ್ತಿರುವದು ಖಂಡನೀಯ. ಇಂದು ಸಾಂಕೇತಿಕವಾಗಿ ಪ್ರತಿಭಟಿಸಿದ್ದೇವೆ. ತಪ್ಪಿತಸ್ಥರ ಮೇಲೆ ಕ್ರಮ ಜರುಗದಿದ್ದರೆ ಮುಂದೆ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ನಗರಾಧ್ಯಕ್ಷ ಅನಿಲ ಅಬ್ಬಿಗೇರಿ, ಸುಧೀರ ಕಾಟಿಗಾರ, ದೇವಪ್ಪ ಗೊಟೂರ, ಶ್ರೀಪತಿ ಉಡುಪಿ, ಎಂ.ಎಸ್. ಕರೀಗೌಡ್ರ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಉಷಾ ಮಹೇಶ ದಾಸರ, ವಿದ್ಯಾವತಿ ಅಮರನಾಥ ಗಡಗಿ, ವಿಜಯಲಕ್ಷ್ಮೀ ಶಶಿಧರ ದಿಂಡೂರ, ವೆಂಕಟೇಶ ಹಬೀಬ, ರಾಹುಲ ಸಂಕಣ್ಣವರ, ನವೀನ ಕೊಟೆಕಲ್, ರಾಜೇಶ ಅರಕಲ್, ರಾಘವೇಂದ್ರ ಯಳವತ್ತಿ, ಶಿವು ಹಿರೇಮನಿಪಾಟೀಲ, ವಿನಾಯಕ ಮಾನ್ವಿ, ನಾಗರಾಜ ತಳವಾರ, ಸುರೇಶ ಚಿತ್ತರಗಿ, ಸುರೇಶ ಮರಳಪ್ಪನವರ, ಜಗನ್ನಾಥಸಾ ಭಾಂಡಗೆ, ಅಪ್ಪಣ್ಣ ಟೆಂಗಿನಕಾಯಿ, ರೇಖಾ ಬಂಗಾರಶೆಟ್ಟರ, ಅಪ್ಪು ನಮಸ್ಥೆಮಠ ಸೇರಿದಂತೆ ಬಿಜೆಪಿ ಯುವ ಮೋರ್ಚಾ ಕಾರ್ಯಕರ್ತರು, ಪ್ರಮುಖರು ಉಪಸ್ಥಿತರಿದ್ದರು.

### ಕುಮಾರ ಮಹಾರಾಜ ಶ್ರೀಗಳಿಗಿಲ್ಲ ಆಹ್ವಾನ । ಸಮಾಜ ಬಾಂಧವರು, ಭಕ್ತರಿಂದ ಪ್ರತಿಭಟನೆ

# ಒಡೆದು ಆಳುವ ನೀತಿ ಶೋಭೆ ತರದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಗುರುವಾರ ನಡೆದ ಸಂತ ಸೇವಾಲಾಲ ಮಹಾರಾಜರ ತಾಲೂಕಾ ಮಟ್ಟದ ಜಯಂತ್ಯುತ್ಸವ ಕಾರ್ಯಕ್ರಮಕ್ಕೆ ಆಹ್ವಾನಿಸಿಲ್ಲ ಎಂದು ಆದರಹಳ್ಳಿ ಗ್ರಾಮದ ಗವಿಸಿದ್ದೇಶ್ವರ ಮಠದ ಕುಮಾರ ಮಹಾರಾಜ ಶ್ರೀಗಳು ಮತ್ತು ಸಮಾಜ ಬಾಂಧವರು, ಭಕ್ತರು ಪ್ರತಿಭಟನೆ ನಡೆಸಿದ ಘಟನೆ ಜರುಗಿದೆ.

ಲಂಬಾಣಿ ಬಂಜಾರ ಸಮಾಜ ಶ್ರೀ ಕುಮಾರ ಮಹಾರಾಜರು ಸೇವಾಲಾಲ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮಕ್ಕೆ ಸಮಾಜದ ಗುರುಗಳಾದ ತಮ್ಮನ್ನು ಅವಮಾನಿಸುವ ಉದ್ದೇಶದಿಂದಲೇ ಆಹ್ವಾನ ನೀಡಿಲ್ಲ. ಸಮಾಜದ ಕಾರ್ಯಕ್ರಮವನ್ನು ರಾಜಕೀಕರಣಗೊಳಿ ಸಮಾಜವನ್ನು ಒಡೆಯುವ ಕಾರ್ಯ ಮಾಡುತ್ತಿದ್ದಾರೆ. ನಮ್ಮನ್ನಷ್ಟೇ ಅಲ್ಲದೇ ಸಮಾಜದ ಜಿಲ್ಲಾಧ್ಯಕ್ಷರು, ಸಮಾಜದ ಹಿರಿಯರನ್ನು ನಿರ್ಲಕ್ಷಿಸಿ ಒಂದು ಪಕ್ಷಕ್ಕೆ ಸೀಮಿತಗೊಳಿಸಿ ಸಮಾಜವನ್ನು ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಇದು ಸಮಾಜಕ್ಕೆ ಕೆಟ್ಟ ಸಂದೇಶ ನೀಡುತ್ತದೆ. ಸದಾಶಿವ ಆಯೋಗದ ವರದಿ ಜಾರಿ ವಿರೋಧಿಸಿ ಹೋರಾಟ ನಡೆಸಲು ಮಾತ್ರ ಇವರಿಗೆ ಸಮಾಜದ ಶ್ರೀಗಳು ಬೇಕಾ? ಸಮಾಜದ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ನಮ್ಮನ್ನು ರಾಜಕೀಯ ಉದ್ದೇಶದಿಂದ ಕೆಲವರ ಮಾತು ಕೇಳಿ ಕಾರ್ಯಕ್ರಮದ ಆಮಂತ್ರಣ ಪತ್ರಿಕೆಯಲ್ಲೂ ತಮ್ಮ ಹೆಸರನ್ನು ಹಾಕಿಸದಂತೆ ಸಂಘಟಕರು ಸಣ್ಣತನ ತೇ–ೂರಿದ್ದಾರೆ ಎಂದು ಹರಿಹಾಯ್ದರು. ತಮ್ಮನ್ನು ನಿರ್ಲಕ್ಷಿಸಿರುವ ಕಾರಣ ಹೇಳುವವರೆಗೂ ತಾವು ಪ್ರತಿಭಟನೆಯಿಂದ ಹಿಂದೆ ಸರಿಯುವುದಿಲ್ಲ, ಹನಿ ನೀರು ಕುಡಿಯುವುದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಸಂಜೆ ಪ್ರತಿಭಟನಾ ನಿತರ ಸ್ಥಳಕ್ಕೆ ಆಗಮಿಸಿದ ಮಾಜಿ ಶಾಸಕ ರಾಮಣ್ಣ ಲಮಾಣಿ ಮತ್ತು ಕೆಲ ಮುಖಂಡರು ಪ್ರತಿಭಟನೆ ಕೈಬಿಡುವಂತೆ ಮನವಿ ಮಾಡಿದರು. ಈ ವೇಳೆ ತಮ್ಮ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿರುವ ಮತ್ತು ತಮ್ಮ ಹೆಸರು ಹಾಕಿಸದಂತೆ ತಡೆದವರು ಇಲ್ಲಿಗೆ ಬಂದು ತಮಗೆ ಸೂಕ್ತ ಕಾರಣ ನೀಡಬೇಕು ಎಂದು ಪಟ್ಟುಹಿಡಿದ್ದರಿಂದ ರಾತ್ರಿಯವರೆಗೂ ಪ್ರತಿಭಟನೆ ಮುಂದುವರೆದಿತ್ತು.

ಈ ವೇಳೆ ಮಾತನಾಡಿದ ಚನ್ನಪ್ಪ ಲಮಾಣಿ, ರಾಜಕೀಯ ದ್ವೇಷ, ಅಸೂಯೆ ಏನೇ ಇರಲಿ. ಸೇವಾಲಾಲ ಜಯಂತಿ ಮತ್ತು ಸಂಘಟನೆಯ ಕಾರ್ಯಕ್ರಮದಲ್ಲಿ ಸಮಾಜದ ಶ್ರೀ ಕುಮಾರ ಮಹಾರಾಜರನ್ನು ಉದ್ದೇಶ ಪೂರ್ವಕವಾಗಿ ಕೈಬಿಟ್ಟಿರುವುದು ಖಂಡನೀಯ. ಶ್ರೀಗಳು ಸಮಾಜದ ಶ್ರೇಯೋಭೀವೃದ್ಧಿಗಾಗಿ ಸಮರ್ಪಿಸಿಕೊಂಡಿದ್ದು, ಅವರ ಬಗ್ಗೆ ಇಲ್ಲಸಲ್ಲದ ಆರೋಪ ಮಾಡುತ್ತಿರುವುದು ಸರಿಯಲ್ಲ. ಈ ರೀತಿ ಸಮಾಜವನ್ನು ಒಡೆದು ಆಳುವ ನೀತಿ ಯಾರಿಗೂ ಶೋಭೆ ತರುವುದಿಲ್ಲ. ಇದಕ್ಕೆ ಸಂಘದ ತಾಲೂಕಾ ಅಧ್ಯಕ್ಷರೇ ಕಾರಣೀಕರ್ತರಾಗಿದ್ದು, ಅವರು ಶ್ರೀಗಳ ಕ್ಷಮೆ ಯಾಚಿಸಬೇಕೆಂದು ಆಗ್ರಹಿಸಿದರು.

ಸಂಜೆ ಪ್ರತಿಭಟನಾ ನಿತರ ಸ್ಥಳಕ್ಕೆ ಆಗಮಿಸಿದ ಮಾಜಿ ಶಾಸಕ ರಾಮಣ್ಣ ಲಮಾಣಿ ಮತ್ತು ಕೆಲ ಮುಖಂಡರು ಪ್ರತಿಭಟನೆ ಕೈಬಿಡುವಂತೆ ಮನವಿ ಮಾಡಿದರು. ಈ ವೇಳೆ ತಮ್ಮ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿರುವ ಮತ್ತು ತಮ್ಮ ಹೆಸರು ಹಾಕಿಸದಂತೆ ತಡೆದವರು ಇಲ್ಲಿಗೆ ಬಂದು ತಮಗೆ ಸೂಕ್ತ ಕಾರಣ ನೀಡಬೇಕು ಎಂದು ಪಟ್ಟುಹಿಡಿದ್ದರಿಂದ ರಾತ್ರಿಯವರೆಗೂ ಪ್ರತಿಭಟನೆ ಮುಂದುವರೆದಿತ್ತು.

ಪ್ರತಿಭಟನೆಯಲ್ಲಿ ಸುರೇಶ ಲಮಾಣಿ, ಚಂದ್ರಕಾಂತ ಲಮಾಣಿ, ಅಲ್ಲಾಭಕ್ಷಿ ವಾಲಿಕಾರ, ಮಂಜು ಲಮಾಣಿ, ಚನ್ನಪ್ಪ ಲಮಾಣಿ, ಧರ್ಮಣ್ಣ ಲಮಾಣಿ, ಲಚ್ಚಪ್ಪ ಲಮಾಣಿ, ನಾಗೇಶ ಲಮಾಣಿ, ರಮೇಶ ಲಮಾಣಿ, ತೀಪಲಪ್ಪ ಲಮಾಣಿ, ಶಂಕರ ಲಮಾಣಿ ಇದ್ದರು.

## ಸಂಪಾದಕೀಯ

# ಸೋರಿಕೆಗೆ ಅವಕಾಶ ನೀಡದಂತೆ ಜಾತಿ ಗಣತಿ ವರದಿ ಬಹಿರಂಗವಾಗಲಿ

ಕಾಂತರಾಜು ಆಯೋಗ ಸಿದ್ಧಪಡಿಸಿದ ಜಾತಿ ಜನಗಣತಿ ವರದಿ ಇಂದು ಅಧಿಕೃತವಾಗಿ ಸರಕಾರಕ್ಕೆ ಸಲ್ಲಿಕೆಯಾಗಿದೆ. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗಡೆ, ಒಟ್ಟು 13 ಸಂಪುಟಗಳ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರ ಮಾಡಿದ್ದಾರೆ.

2014–15ರಲ್ಲಿ ಕಾಂತರಾಜು ಆಯೋಗ ಈ ಜಾತಿ ಜನಗಣತಿ ವರದಿಯನ್ನ ಸಿದ್ಧಪಡಿಸಿತ್ತು. ಆದರೆ ರಾಜ್ಯಾದ್ಯಂತ ಈ ಆಯೋಗದ ವರದಿಗೆ ಪರ ವಿರೋಧ ಚರ್ಚೆಗಳು ತೀವ್ರ ಗೊಂಡ ಹಿನ್ನಲೆಯಲ್ಲಿ, ಕಾಂಗ್ರೆಸ್ ಮತ್ತು ಬಿಜೆಪಿ ಸರ್ಕಾರಗಳೆರಡು ಈ ವರದಿಯನ್ನ ಸ್ವೀಕರಿಸಲು ಹಿಂದೇಟು ಹಾಕಿದವು ಎನ್ನಬಹುದು.

ಆದರೆ ಈಗಿನ ಕಾಂಗ್ರೆಸ್ ಸರ್ಕಾರ ಜಾತಿ ಜನಗಣತಿ ವರದಿಯನ್ನ ಸ್ವೀಕರಿಸುವ ಬಹುದೊಡ್ಡ ತೀರ್ಮಾನಕ್ಕೆ ಬಂದಿದೆ. ಕಾಂಗ್ರೆಸ್ ಪಕ್ಷದಲ್ಲಿಯೇ ಕಾಂತರಾಜು ಆಯೋಗದ ಈ ಜಾತಿ ಜನಗಣತಿ ವರದಿ ಸ್ವೀಕಾರಕ್ಕೆ ಸಾಕಷ್ಟು ವಿರೋಧ ವ್ಯಕ್ತವಾಗಿದೆ. ವಿರೋಧ ಪಕ್ಷದ ನಾಯಕರು ಹಾಗೂ ಅನೇಕ ಸಮುದಾಯಗಳ ಮಠಾಧೀಶರು ಸಹ ಜಾತಿ ಜನಗಣತಿ ವರದಿ ಸ್ವೀಕಾರಕ್ಕೆ ತಮ್ಮ ವಿರೋಧವನ್ನು ದಾಖಲಿಸಿದ್ದರು.

ವರದಿ ಬಹಿರಂಗಗೊಳ್ಳುವ ಮುನ್ನವೇ ಪೂರ್ವಗ್ರಹ ಪೀಡಿತರಂತೆ ಅನೇಕರು ವರದಿಯ ಪರ, ವಿರೋಧ ಕುರಿತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹ, ವರದಿಯ ಅಂಶಗಳನ್ನು ನೋಡಿ ಅಭಿಪ್ರಾಯಗಳನ್ನ ವ್ಯಕ್ತಪಡಿಸುವಂತೆ ಸಲಹೆ ನೀಡಿದರು, ಸ್ವಪಕ್ಷಯರೇ ಸಿದ್ದರಾಮಯ್ಯ ಮಾತು ಕೇಳದೆ ಜಾತಿ ಜನಗಣತಿಯ ವಿರೋಧ ಮಾಡಿದರು.

ಈ ಎಲ್ಲಾ ವಿರೋಧಾಭಾಸಗಳ ಮಧ್ಯೆಯು ಮುಖ್ಯಮಂತ್ರಿ ಸಿದ್ದರಾಮಯ್ಯ, ಜಾತಿ ಜನಗಣತಿ ವರದಿ ಸ್ವೀಕರಿಸುವುದಕ್ಕಾಗಿಯೇ ಹಿಂದುಳಿದ ವರ್ಗದ ಆಯೋಗದ ಅವಧಿಯನ್ನ ವಿಸ್ತರಣೆ ಮಾಡಿತು. ಅದರ ಪರಿಣಾಮ ಇಂದು ಜಯಪ್ರಕಾಶ್ ಹೆಗಡೆ ತಮ್ಮ ವರದಿಯನ್ನು ಸಲ್ಲಿಸಿದರು.

ಜಾತಿ ಜನಗಣತಿ ವರದಿ ಸಲ್ಲಿಕೆಯಾಗುತ್ತಿದ್ದಂತೆಯೇ ಅದರ ಅಂಶಗಳು ಸೋರಿಕೆಯಾಗಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಸುದ್ದಿ ಹರಿದಾಡುತ್ತಿದೆ. ವಾಸ್ತವಂಶ ಏನೇ ಇರಲಿ, ಸರ್ಕಾರ ಆದಷ್ಟು ಬೇಗ ಈ ವರದಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಬೇಕು. ವರದಿಯ ಕುರಿತು ವದಂತಿ ಹರಡುವ ಮುನ್ನವೇ ವರದಿಯ ನಿಜಾಂಶ ಬಹಿರಂಗವಾಗಲಿ.

## ನಡೆದಾಡುವ ದೇವರು ಡಾ. ಪುಟ್ಟರಾಜ ಕವಿ ಗವಾಯಿಗಳ 110ನೇ ಜಯಂತ್ಯುತ್ಸವ

# ಸಮಾಜ ಸೇವೆಯಿಂದ ಗೆದ್ದ ಸಾಮ್ರಾಟ

ಕನ್ನಡ ನಾಡು–ನುಡಿ, ಧರ್ಮ, ಕಲೆ ಅವುಗಳ ಸರ್ವತೋಮುಖವಾದ ಏಳಿಗೆಗಾಗಿ ತಮ್ಮ ಪವಿತ್ರವಾದ ಜೀವನವನ್ನೇ ಮುಡುಪಾಗಿಟ್ಟಿದ್ದ ಗದಗ ವೀರೇಶ್ವರ ಪುಣ್ಯಾಶ್ರಮದ ಕುಲಪತಿಗಳು, ಅಂಧರ ಬಾಳಿನ ಕಣ್ಣುಗಳಾದ ಕನ್ನಡ, ಸಂಸ್ಕೃತ, ಹಿಂದಿ ಭಾಷೆಗಳಲ್ಲಿ ಕವಿವರ್ಯರೂ, ಕರ್ನಾಟಿಕ್ ಮತ್ತು ಹಿಂದೂಸ್ತಾನಿ ಸಂಗೀತಗಳ ಆಚಾರ್ಯ ಪುರುಷರು, ಗಾನಯೋಗಿ ಪಂಡಿತ್ ಪಂಚಾಕ್ಷರಿ ಗವಾಯಿಗಳವರ ಶಿಷ್ಯರೂ ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರೂ ಆದ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರು ತಾವೇ ರಚಿಸಿದ ಹಿಂದಿ ಬಸವ ಪುರಾಣದಲ್ಲಿ 'ಮೈ ಛೋಟೋ ಮೆ ಛೋಟಾ ಹೂಂ' ಎಂದು ವಿನಯಶೀಲತೆಯಿಂದ ತಮ್ಮನ್ನು ಕರೆದುಕೊಂಡರೂ ಅವರ ಹೆಸರು ಪುಟ್ಟರಾಜರಾದರೂ ಅಂಧ ಅನಾಥರ, ದೀನ–ದಲಿತರ ದೊಡ್ಡ ರಾಜರಿವರು, ಅಂಧ ಅನಾಥರಿಂದ ತುಂಬಿದ ಪುಣ್ಯಾಶ್ರಮವೇ ಇವರಿಗೆ ಅರಮನೆ ಇದ್ದಹಾಗೆ, ಸಂಗೀತ ವಾದ್ಯಗಳೇ ಇವರ ಕತ್ತಿ–ಕಠಾರಿಗಳು, ಕುರುಡು ಶಿಷ್ಯರೇ ಸೈನಿಕರು, ಜಗದ ಜನರ ಹೃದಯ ಸಾಮ್ರಾಜ್ಯವನ್ನು ಧರ್ಮ, ಸಂಗೀತ, ಸಾಹಿತ್ಯ ಸಮಾಜ ಸೇವೆಯಿಂದ ಗೆದ್ದ ಸಾಮ್ರಾಟರಿವರು.

ಪರಶಿವನ ಅವತಾರಿಯಾಗಿ ಲೋಕ ಉದ್ಧರಿಸಲು ಮಾಡಿದ ಧರೆಯ ದೇವರು, ಜ್ಞಾನವೇ ಮೂರ್ತಿವೆತ್ತಂತೆ ಧರೆಗಿಳಿದು ಬಂದ 'ಜ್ಞಾನ ದೇಗುಲ' ಇವರು. ಈ ದೇಗುಲದಲ್ಲಿ ಬಡವ–ಬಲ್ಲಿದ, ಮೇಲು–ಕೀಳು ಎನ್ನುವ ತಾರತಮ್ಯವಿರಲಿಲ್ಲ. ಎಲ್ಲರಿಗೂ ಮುಕ್ತ ಪ್ರವೇಶ, ಕರುಣಾಮಯಿ ವಿಶ್ವ ಮಾನವ ರಸಋಷಿ, ದೇವಮಾನವ ಮಹಿಮಾ ಪುರುಷರು. ಕಾರಣೀಕ ಯುಗ ಪುರುಷ ಎಂದು ನಾಡಿಗೆ ಗೊತ್ತಿದೆ. ಸಂಗೀತ, ಸಾಹಿತ್ಯ, ಶೈಕ್ಷಣಿಕ, ಧರ್ಮ, ಸಮಾಜಿಕ ರಂಗದಲ್ಲಿ ಜಗದ್ಗುರುವಾಗಿ ಅಮರರಾಗಿರುವ ಮಹಾ ಮಾನವತಾವಾದಿಯೇ ಗುರುಪುಟ್ಟರಾಜರು.

ಪೂಜ್ಯ ಪುಟ್ಟರಾಜ ಗವಾಯಿಗಳವರು, 1914ನೇ ಮಾರ್ಚ್ 3ರಂದು ಹಾವೇರಿ ತಾಲೂಕಿನ ಕರ್ಜಗಿಯ ಹತ್ತಿರದ ದೇವಗಿರಿಯಲ್ಲಿ ಜನಿಸಿದರು. ಇವರ ಮೂಲ ಊರು ಹಾನಗಲ್ಲ ತಾಲೂಕಿನ ದೇವರ ಹೊಸಪೇಟೆ ಎಂಬ ಹಳ್ಳಿ. ಹೆರಿಗೆಗಾಗಿ ಇವರ ತಾಯಿಯನ್ನೂ



ದೇವಗಿರಿಗೆ ಕರೆದುಕೊಂಡು ಹೋಗಿದ್ದರಿಂದ ಅಲ್ಲಿಯೇ ಪುಟ್ಟರಾಜರ ಜನನವಾಯಿತು. ಮಗುವಿಗೆ ಪುಟ್ಟಯ್ಯನೆಂದು ನಾಮಕರಣ ಮಾಡಿದರು.

ಹುಟ್ಟಿದ ಆರು ತಿಂಗಳಿಗೆ ಕಣ್ಣು ಬೇನೆ ಬಂದು ಕಣ್ಣಲ್ಲಿ ಪರಿ ಬೆಳೆದವು. ಹಳ್ಳಿಯ ನಾಟಿ ವೈದ್ಯರ ಸಲಹೆಯಂತೆ ಕಣ್ಣಿನ ಪರಿ ಹರಿಯಲು ತೋನಸಿಗಳನ್ನು ಬಳಿಸಿದರು. ಆ ತೋನಸಿ ಪರಿ ಹರಿಯುವದರ ಬದಲು ಇವರ ಕಣ್ಣುಗುಡ್ಡೆಯನ್ನೇ ಹರಿದವು, ದೈವ ನಿಯವವನ್ನು ಮೀರಲು ಸಾಧ್ಯವಿಲ್ಲದ ಕಾರಣ ಕೂಸು ಕುರುಡಾಗಿ ದೃಷ್ಟಿ ಬರಡಾಯಿತು.

ಚಿಕ್ಕಂದಿನಲ್ಲಿಯೇ ತಂದೆಯನ್ನು ಕಳೆದುಕೊಂಡಾಗ ಸೋದರ ಮಾವ ಚಂದ್ರಶೇಖರಯ್ಯನವರೇ ಈ ಅನಾಥ ಮಗುವಿನ ಪೋಷಣೆಯ ಭಾರ ಹೊತ್ತುಕೊಂಡರು. ಪಂಡಿತ ಪಂಚಾಕ್ಷರ ಗವಾಯಿಗಳವರ ಶಿಷ್ಯರಾಗಿದ್ದ ಇವರು ಸಂಗೀತ ಮತ್ತು ಸಾಹಿತ್ಯದಲ್ಲಿ ಪುಟ್ಟರಾಜರಿಗೆ ಮೊದಲ ಗುರುವಾದರು. ತಮ್ಮಲ್ಲಿದ್ದ ಎಲ್ಲ ವಿದ್ಯೆಯನ್ನು ಪುಟ್ಟರಾಜರಿಗೆ ಧಾರೆ ಎರೆದರು. 8ನೇ ವಯಸ್ಸಿಗೆ ಪುಟ್ಟರಾಜರಿಗೆ ಸಂಗೀತ ಮತ್ತು ಸಾಹಿತ್ಯ ಕುರಿತು ವಚನ, ಚೀಜ್, ತತ್ವಪದಗಳನ್ನು ಸರಳವಾಗಿ ಬಾರಿಸುತ್ತಾ ಹಾಡುವುದಕ್ಕೆ ಸಮರ್ಥರಾದರು.

ಪುಟ್ಟರಾಜರಿಗೆ ಎಂಟು ವರ್ಷವಿದ್ದಾಗ ಚಂದ್ರಶೇಖರಯ್ಯನವರು ಅವರ ಭವಿಷ್ಯದ ಬಗೆಗೆ ಚಿಂತಿಸಿ ಅವರನ್ನು ಶ್ರೇಷ್ಠ ಸಂಗೀತಗಾರರನ್ನಾಗಿಸಬೇಕೆಂದು ಸಂಕಲ್ಪಿಸಿ ಅವರಿಗೆ ಸಮರ್ಥ ಗುರು ಎಂದು ಪಂಚಾಕ್ಷರಿ ಗವಾಯಿಗಳು ಎಂದು ನಿರ್ಧರಿಸಿ ಅವರಿದ್ದ ನವಲಗುಂದ ಕ್ಯಾಂಪ್‌ಗೆ ಕರೆತಂದರು. ಗುರು ಕೇಳಿದ ಪ್ರಶ್ನೆಗಳಿಗೆ ಪುಟ್ಟರಾಜರು ದಿಟ್ಟತನದಿಂದಲೇ ಉತ್ತರ ಕೊಟ್ಟರು. ಹುಡುಕುವ ಬಳ್ಳಿ ಕಾಲ್ತೊಡಕಿದಂತಾಯಿತು. ನನ್ನ ಹೆಸರು ಬೆಳಗುವ ಕಂದ(ಶಿಷ್ಯ)ನನ್ನು ಗುರು ಕುಮಾರೇಶ್ವರನೇ ಕಳಿಸಿಕೊಟ್ಟಿರುವನು ಎಂದು ಆನಂದ ಭಾಷ್ಪ ಸುರಿಸಿದರು.

ಪಟ್ಟರಾಜರ ಆಗಾಧ ಜ್ಞಾನಕ್ಕೆ ಮಾರು ಹೋಗಿ ಅವರಿಗೆ ಕನ್ನಡ, ಸಂಸ್ಕೃತಿ, ಹಿಂದಿ, ಸಾಹಿತ್ಯವನ್ನು ಕಲಿಸುವ ಏರ್ಪಾಡು ಮಾಡಿದರು. ಬೆರಳು ಕೊಟ್ಟರೆ ಹಸ್ತ ನುಂಗುವ ಪುಟ್ಟರಾಜರು, ಹಿಂದಿ, ಸಂಸ್ಕೃತ ಮತ್ತು ಕನ್ನಡದಲ್ಲಿ ಪ್ರಖ್ಯಾತ ಪಂಡಿತರಾಗಿ ನಂತರ ತಾವೇ ಉಳಿದ ವಿದ್ಯಾರ್ಥಿಗಳಿಗೆ ಪಾಠ ಹೇಳಿಕೊಡಲು ತೊಡಗಿದರು. ಉಭಯ ಗಾನ ವಿಶಾರದರಾದ ಪಂ. ಪಂಚಾಕ್ಷರ ಗವಾಯಿಗಳು ತಮ್ಮ ಸಂಗೀತ ವಿದ್ಯೆಯಲ್ಲವನ್ನೂ ಗುರುಪುಟ್ಟರಾಜರಿಗೆ ಧಾರೆ ಎರೆದರು. ಗುರು ಪುಟ್ಟರಾಜರು ಉಭಯಗಾಯನ ವಿಶಾರದರಾಗಿ ಹಾರ್ಮೋನಿಯಂ, ತಬಲಾ, ವಾಯಲಿನ್, ಸಾರಂಗಿ ಮುಂತಾದ ವಾದ್ಯಗಳನ್ನು ಲೀಲಾಜಾಲವಾಗಿ ನುಡಿಸಬಲ್ಲ ಸಾಮರ್ಥ್ಯ ಹೊಂದಿ ಸಾಹಿತ್ಯ, ಸಂಗೀತ, ಸಂಸ್ಕೃತಿಯನ್ನು ಒಲಿಸಿಕೊಂಡು ಪಂಡಿತ ಪುಟ್ಟರಾಜರಾಗಿ, ಗುರುವಿಗೆ ತಕ್ಕ ಶಿಷ್ಯರಾಗಿ ಮೆರೆದರು.

ಗುರು ಪುಟ್ಟರಾಜರ 110ನೇ ಜಯಂತ್ಯುತ್ಸವವನ್ನು ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನ ಮತ್ತು ಅಶ್ವಿನಿ ಪ್ರಕಾಶನದಡಿಯಲ್ಲಿ ಆಚರರಿಸುತ್ತಿರುವುದು ಕೂಡ ನಮ್ಮ ಸೌಭಾಗ್ಯವೇ ಸರಿ.

**– ಡಾ. ವ್ಹಿ.ವ್ಹಿ. ಹಿರೇಮಠ.**
ಅಧ್ಯಕ್ಷರ ಅಶ್ವಿನಿ ಪ್ರಕಾಶನ, ಗದಗ.

# ಅಭಿನಂದನಾ ಸಮಾರಂಭ ಇಂದು

**■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಕಳೆದ ನವೆಂಬರ್–ಡಿಸೆಂಬರ್‌ನಲ್ಲಿ ನಡೆದ ಅತಿಥಿ ಉಪನ್ಯಾಸಕರ ಸಂಘಟನೆಯ ಹೋರಾಟಕ್ಕೆ ಸಹಕರಿಸಿದ ಗಣ್ಯಮಾನ್ಯರನ್ನು ಸತ್ಕರಿಸುವ ಅಭಿನಂದನಾ ಸಮಾರಂಭ ಮಾರ್ಚ್ 1ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಅತಿಥಿ ಉಪನ್ಯಾಸಕ ಸಂಘಟನೆಯ ಅಧ್ಯಕ್ಷ ಡಾ.ವೀರಣ್ಣ ಸಜ್ಜನರ ಹಾಗೂ ಪ್ರಧಾನ ಕಾರ್ಯದರ್ಶಿ ಡಾ.ಸಣ್ಣದೇವೇಂದ್ರಸ್ವಾಮಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸಮಾರಂಭದಲ್ಲಿ ಅತಿಥಿ ಉಪನ್ಯಾಸಕರ ಸಂಘಟನೆಯ ರಾಜ್ಯಾಧ್ಯಕ್ಷ ಡಾ.ಹನುಮಂತಗೌಡ ಕಲ್ಮನಿ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ವಿನೋದ ಚಂದ ಪೀಟರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಡಾ.ತಿಮ್ಮಾರಡ್ಡಿ ಮೇಟಿ ವಹಿಸುವರು ಎಂದು ಅವರು ತಿಳಿಸಿದ್ದಾರೆ.

# ರಂಭಾಪುರಿ ಶ್ರೀಗಳ ಮಾರ್ಚ್ ತಿಂಗಳ ಪ್ರವಾಸ

**■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ ಮಾರ್ಚ್ 2024ನೇ ಮಾಹೆಯ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿದೆ.

ಮಾ.1ರಂದು ಸವದತ್ತಿ ತಾಲೂಕ ಹರಳಕಟ್ಟಿಯಲ್ಲಿ ಲಿಂ. ಶ್ರೀ ಸಂಗಮೇಶ್ವರ ಅಜ್ಜನವರ ಪುಣ್ಯ ಸ್ಮರಣೋತ್ಸವ, 2ರಂದು ಸವದತ್ತಿ ತಾಲೂಕ ಹೂಲಿ ಸಾಂಬಯ್ಯನವರ ಮಠದಲ್ಲಿ ಲಿಂ. ಶ್ರೀ ಸಂಗಮೇಶ್ವರ ಅಜ್ಜನವರ ಲಿಂಗಾಂಗ ಸಾಮರಸ್ಯ ಸಮಾರಂಭ, 4ರಂದು ಹುಬ್ಬಳ್ಳಿ ತಾಲೂಕ ಹಳ್ಳಿಯಾಳದಲ್ಲಿ ಶ್ರೀ ನಂದಿಬಸವೇಶ್ವರ ಮೂರ್ತಿ ಪ್ರತಿಷ್ಠಾಪನಾ ಸಮಾರಂಭದ ಸಾನ್ನಿಧ್ಯ ವಹಿಸುವರು.

ಮಾ. 5ರಂದು ಹರಿಹರ ತಾಲೂಕ ಮಲೇಬೆನ್ನೂರು ಗ್ರಾಮದಲ್ಲಿ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಲ್ಲಿ ಇಷ್ಟಲಿಂಗ ಮಹಾಪೂಜಾ ಸಮಾರಂಭ, 6 ಮತ್ತು 7ರಂದು ಮುದ್ದೇಬಿಹಾಳ ತಾಲೂಕ ಕುಂಟೋಜಿಯಲ್ಲಿ ಪುರ ಪ್ರವೇಶ ಮತ್ತು ಹಿರೇಮಠದ



ನೂತನ ಶ್ರೀಗಳವರ ಗುರು ಪಟ್ಟಾಧಿಕಾರ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಾ. 8ರಂದು ಬೆಳಿಗ್ಗೆ 9.30ಕ್ಕೆ ವಿಜಯಪುರ ಜಿಲ್ಲೆ ಹೊರ್ತಿ ಕ್ಷೇತ್ರದಲ್ಲಿ ಇಷ್ಟಲಿಂಗ ಮಹಾಪೂಜಾ–ಸಮಾರಂಭ, ಸಂಜೆ 6ಕ್ಕೆ ದಕ್ಷಿಣ ಸೊಲ್ಲಾಪುರ ತಾಲೂಕ ಮಾಳಕವಠೆ ಗ್ರಾಮದಲ್ಲಿ ಉತ್ಸವ ಮತ್ತು ಮಹಾಶಿವರಾತ್ರಿ ಸಮಾರಂಭ, 9ರಂದು ಆಳಂದ ತಾಲೂಕ ಚಲಗೇರಾದಲ್ಲಿ ಧರ್ಮ ಜಾಗೃತಿ ಸಮಾರಂಭ, 10ರಂದು ಲಕ್ಷ್ಮೇಶ್ವರ ತಾಲೂಕ ಮುಕ್ತಿಮಂದಿರ ಕ್ಷೇತ್ರದಲ್ಲಿ ಶಿವರಾತ್ರಿ ಜಾತ್ರಾ ಮಹೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸುವರು.

ಮಾ. 14ರಂದು ಜಗಳೂರು ತಾಲೂಕ ಕೊಡದಗುಡ್ಡ ಕ್ಷೇತ್ರದಲ್ಲಿ ಯಾತ್ರಿ ನಿವಾಸ ಉದ್ಘಾಟನೆ ಮಾಡುವರು. ಮಾ. 20ರಿಂದ 26ರವರೆಗೆ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಮಹಾಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾ ರಥೋತ್ಸವ ಅಂಗವಾಗಿ ವಿವಿಧ ಧರ್ಮ ಸಮಾರಂಭಗಳ ಸಾನ್ನಿಧ್ಯ ವಹಿಸುವರು.

ಮಾ. 29ರಂದು ಸಕಲೇಶಪುರ ತಾಲೂಕ ಎಸಳೂರಿನಲ್ಲಿ ಲಿಂ. ಶ್ರೀ ಚನ್ನಮಲ್ಲಿಕಾರ್ಜುನ ಶ್ರೀಗಳ ಪುಣ್ಯ ಸ್ಮರಣೋತ್ಸವ ಹಾಗೂ ಇಷ್ಟಲಿಂಗ ಮಹಾಪೂಜಾ, 30ರಂದು ಸೊರಬ ತಾಲೂಕ ದುಗ್ಲಿಯಲ್ಲಿ ಜಾತ್ರಾ ಮಹೋತ್ಸವ ಸಮಾರಂಭ ಹಾಗೂ 31ರಂದು ಸೊರಬ ತಾಲೂಕ ಶಾಂತಪುರಮಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಸಮಾರಂಭದ ಸಾನ್ನಿಧ್ಯ ವಹಿಸುವರು ಎಂದು ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ತಿಳಿಸಿದ್ದಾರೆ.



**■ ವಿಜಯಸಾಕ್ಷಿ ಸುದ್ದಿ, ಗದಗ**

ತಮಿಳುನಾಡಿನ ಶಭರಿಮಲೈ ಸ್ವಾಮಿ ಶರಣಂ ಅಯ್ಯಪ್ಪನವರ ಪರಮ ಭಕ್ತರು ಹಾಗೂ ಗಣ್ಯ ಉದ್ಯಮಿಗಳಾದ ಸಂದೇಶ ಇರಾಳರ ನೇತೃತ್ವದಲ್ಲಿ ಸಂಭಾಪೂರ ರಸ್ತೆಯಲ್ಲಿನ ಶ್ರೀ ಅನ್ನದಾನ ಪ್ರಭು ಸನ್ನಿಧಾನದ ಸುಮಾರು 25 ಸದ್ಭಕ್ತರು ಸುಕ್ಷೇತ್ರ ತಿರುಪತಿ ತಿರಮಲನ ದರ್ಶನ ಸೇವೆಯನ್ನು ಮಾಡಿದರು.

# ವಿಜ್ಞಾನ ವಸ್ತು ಪ್ರದರ್ಶನದಿಂದ ಮೌಢ್ಯತೆ ದೂರ




**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಶಾಲಾ ಹಂತದಲ್ಲಿಯೇ ವಿದ್ಯಾರ್ಥಿನಿಯರಲ್ಲಿ ಮೌಢ್ಯತೆ ಹೋಗಲಾಡಿಸಲು, ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸುವಲ್ಲಿ ವಿಜ್ಞಾನ ವಸ್ತು ಪ್ರದರ್ಶನಗಳು ಸಹಕಾರಿಯಾಗಲಿದೆ ಎಂದು ಮುಖ್ಯ ಶಿಕ್ಷಕಿ ಎಸ್.ಬಿ. ಅಬ್ಬಿಗೇರಿ ಹೇಳಿದರು.

ಡಂಬಳ ಗ್ರಾಮದ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನ ಶಿಕ್ಷಕಿ ಬಿ.ವ್ಹಿ. ತುರಕಾಣಿ ಮಾರ್ಗದರ್ಶನದಲ್ಲಿ ವಿದ್ಯಾರ್ಥಿನಿಯರು 45ಕ್ಕೂ ಹೆಚ್ಚು ಪ್ರಯೋಗಗಳನ್ನು ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಸಹಶಿಕ್ಷಕಿಯರಾದ ಯು.ಎಸ್. ಭಾವಿಕಟ್ಟಿ, ಎನ್.ಡಿ. ಶಿರೋಳಕರ, ಎಸ್.ಎ. ತಳವಾರ, ಎಫ್.ಎಸ್. ಡೋಣಿ, ಎಮ್.ಎಫ್. ಅಡೂರ, ಎಸ್.ಟಿ. ಕಳಸಣ್ಣವರ ಸೇರಿದಂತೆ ವಿದ್ಯಾರ್ಥಿನಿಯರು ಇದ್ದರು.

# ಚಾಲಕ-ಕಂ-ನಿರ್ವಾಹಕರ ಹುದ್ದೆಗೆ ಅರ್ಜಿ ಸಲ್ಲಿಸಿದವರ ಮೂಲ ದಾಖಲೆ / ದೈಹಿಕ ಅರ್ಹತೆ ಮಾ 7ರಂದು ಪರಿಶೀಲನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಈ ಹಿಂದೆ ಸಂಖ್ಯೆ 01/2019 ದಿ. 10/12/2019 ರನ್ವಯ ಚಾಲಕ ಮತ್ತು ಚಾಲಕ–ಕಂ–ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಪ್ರಸ್ತುತ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಮೂಲ ದಾಖಲೆ / ದೈಹಿಕ ಅರ್ಹತೆ ಪರಿಶೀಲನೆಯನ್ನು ದಿ. 07–03–2024 ರಿಂದ ಪ್ರಾದೇಶಿಕ ತರಬೇತಿ ಕೇಂದ್ರ, ಗೋಕುಲ ರಸ್ತೆ, ಹುಬ್ಬಳ್ಳಿಯಲ್ಲಿ ಪ್ರಾರಂಭಿಸಲು ಯೋಜಿಸಲಾಗಿದೆ.

ಅಭ್ಯರ್ಥಿಗಳು ಮೂಲ ದಾಖಲೆ / ದೈಹಿಕ ಅರ್ಹತೆ ಪರಿಶೀಲನೆಗೆ ಹಾಜರಾಗಬೇಕಾದ ದಿನಾಂಕ / ಸಮಯ ಹಾಗೂ ಹಾಜರುಪಡಿಸಬೇಕಾದ ಮೂಲ ದಾಖಲೆಗಳ ವಿವರಗಳ ಕುರಿತು ಸಂಸ್ಥೆಯ ವೆಬ್‌ಸೈಟ್ ವಿಳಾಸ "www.nwkrtc.karnataka.gov.in" ನ್ನು ನಿರಂತರವಾಗಿ ಗಮನಿಸಲು ತಿಳಿಸಲಾಗಿದೆ.

ಈ ವಿಷಯದಲ್ಲಿ ಹೆಚ್ಚಿನ ವಿವರ ಮಾಹಿತಿಗಾಗಿ ಹೆಲ್ಪ್ ಲೈನ್ ಸಂಖ್ಯೆ 7760012989 ಅನ್ನು, ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ


# ಶಾಲಾ ದಿನಗಳ ನೆನಪು ಅಜರಾಮರ

**■ ವಿಜಯಸಾಕ್ಷಿ ಸುದ್ದಿ, ಗದಗ**

ಶಾಲಾ ದಿನಗಳು ಮಾನವನ ಸರ್ವಾಂಗೀಣ ವ್ಯಕ್ತಿತ್ವಕ್ಕೆ ಬುನಾದಿಯಾಗಿದ್ದು, ಮಾನವನ ಜೀವನದುದ್ದಕ್ಕೂ ಶಾಲಾ ದಿನಗಳ ನೆನಪು ಅಮರವಾಗಿರುತ್ತದೆ ಎಂದು ತೋಂಟದ ಸಿದ್ಧೇಶ್ವರ ಪ.ಪೂ ಕಾಲೇಜಿನ ಪ್ರಾಚಾರ್ಯ ವೈ.ಎಸ್. ಮತ್ತೂರ ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ನಗರದ ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಶಾಲೆಯ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ಹೈಸ್ಕೂಲಿನ ಅಂತಿಮ ಘಟ್ಟವಾದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಕಾಲೇಜು ಸೇರುವ ಖುಷಿ ಒಂದೆಡೆಯಾದರೆ, ಇನ್ನೊಂದೆಡೆ ಶಾಲಾ ದಿನಗಳು ಕಳೆದುಹೋದವೆಂಬ ದುಃಖ ಕಾಡುತ್ತದೆ. ತೋಂಟದಾರ್ಯ ಶಿಕ್ಷಣ ಸಂಸ್ಥೆಯು ನಾಲ್ಕು ದಶಕಗಳಿಂದ



ಸಂಸ್ಕಾರಯುತ ಹಾಗೂ ಗುಣಮಟ್ಟದ ಶಿಕ್ಷಣಕ್ಕೆ ಹೆಸರುವಾಸಿಯಾಗಿದೆ. ಸಮಾಜಕ್ಕೆ ಸಾವಿರಾರು ಉತ್ತಮ ನಾಗರಿಕರನ್ನು ಕೊಡುಗೆಯನ್ನಾಗಿ ನೀಡಿದ ಕೀರ್ತಿ ಈ ಶಾಲೆಗಿದೆ. ಎಸ್.ಎಸ್.ಎಲ್.ಸಿಯಲ್ಲಿ ಶೇ.95ಕ್ಕಿಂತ ಹೆಚ್ಚು ಅಂಕ ಪಡೆದವರಿಗೆ ತೋಂಟ–ದಾರ್ಯ ವಿದ್ಯಾಪೀಠದ ತೋಂಟದ ಸಿದ್ಧೇಶ್ವರ ಪದವಿಪೂರ್ವ ಕಾಲೇಜಿನಲ್ಲಿ ಉಚಿತ ಪ್ರವೇಶ ನೀಡುತ್ತಿದ್ದು, ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆಯಬೇಕು ಎಂದರು.

ಎಸ್.ಎಸ್.ಎಲ್.ಸಿಯಲ್ಲಿ ಉನ್ನತ ಶ್ರೇಣಿ ಪಡೆಯುವ ನಮ್ಮ ಶಾಲೆಯ ವಿದ್ಯಾರ್ಥಿಗಳಿಗೆ ಲಿಂ.ತೋಂಟದ ಸಿದ್ಧಲಿಂಗ ಶ್ರೀಗಳ ಹೆಸರಿನಲ್ಲಿ 11,001 ರೂ ನಗದು ಹಾಗೂ ಪ್ರಶಸ್ತಿ ಫಲಕವನ್ನು ಒಳಗೊಂಡ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದರು. ಇದೇ ಸಂದರ್ಭದಲ್ಲಿ ವರ್ಷದುದ್ದಕ್ಕೂ ಶಾಲೆಯಲ್ಲಿ ಜರುಗಿದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣಾ ಸಮಾರಂಭ ಜರುಗಿತು. ವೇದಿಕೆ ಮೇಲೆ ಅತಿಥಿಗಳಾಗಿ ಅಮರೇಶ ಅಂಗಡಿ, ವಿರೂಪಾಕ್ಷಪ್ಪ ಬಳ್ಳೊಳ್ಳಿ ಉಪಸ್ಥಿತರಿದ್ದರು.

ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ತಮ್ಮ ಶಾಲಾ ದಿನಗಳ ಕುರಿತು ಅನಿಸಿಕೆ ವ್ಯಕ್ತಪಡಿಸಿದರು. ಸಾದಿಯಾ ಸಂಗಡಿಗರು ಪ್ರಾರ್ಥಿಸಿದರು. ಕೆ.ಎಂ. ಗೌಡರ ನಿರೂಪಿಸಿದರು. ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರಾದ ನಾಗರಾಜ ಗಾಳಿ, ಶಿಕ್ಷಕರಾದ ಸುರೇಖಾ ಕುಂಬಾರಗೇರಿಮಠ, ಮಧುಮತಿ ಬಂಡಿವಾಡ, ವಂದನಾ ಮಿಸಾಳ, ಪ್ರವೀಣ ಸಂಗಟಿ, ಸ್ವಪ್ನಾ ಯಾದವ, ಕವಿತಾ ನಾರಗುಣ್ಣವರ, ಮಂಜುಳಾ ಭೂಮಣ್ಣವರ, ಶಶಿಧರಗೌಡ ಪಾಟೀಲ ಇದ್ದರು.

ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಮಾತನಾಡಿ, ಮಾನವನಿಗೆ ಬಾಲ್ಯ ಜೀವನ ಅತ್ಯಂತ ಪ್ರಭಾವಶಾಲಿಯಾಗಿದ್ದು, ಬಾಲ್ಯವನ್ನು ವ್ಯಾಪಿಸಿರುವುದೇ ಶಾಲೆಯ ನೆನಪುಗಳಾಗಿವೆ. ನಮ್ಮ ಶಿಕ್ಷಣ ಸಂಸ್ಥೆಯಲ್ಲಿ ಕಲಿತು ಬದುಕು ರೂಪಿಸಿಕೊಂಡ ಅನೇಕ ವಿದ್ಯಾರ್ಥಿಗಳು ಭೇಟಿಯಾದಾಗ ತಮ್ಮ ಶಾಲಾ ದಿನಗಳನ್ನು ನೆನೆದು ಭಾವುಕರಾಗುತ್ತಾರೆ. ಎಸ್.ಎಸ್.ಎಲ್.ಸಿ ಹಂತ ವಿದ್ಯಾರ್ಥಿ ಜೀವನದ ಪ್ರಮುಖ ಮೈಲಿಗಲ್ಲಾಗಿದೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ ನಿರಂತರ ಪರಿಶ್ರಮದಿಂದ ಅಧ್ಯಯನ ಮಾಡಿ ಆದರ್ಶ ಗುಣಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ವೈ.ಎಸ್. ಮತ್ತೂರ ನುಡಿದರು.

# ತರಬೇತಿಗೆ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ತೋಟಗಾರಿಕೆ ಇಲಾಖೆಯಿಂದ ರೈತರ ಮಕ್ಕಳಿಗೆ 2024ರ ಮೇ 2ರಿಂದ 2025ರ ಫೆಬ್ರುವರಿ 28ರವರೆಗೆ 10 ತಿಂಗಳ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

18ರಿಂದ 33 ವಯೋಮಿತಿಯ ಎಸ್.ಎಸ್.ಎಲ್.ಸಿ ಪಾಸಾದ, ಜಮೀನು ಹೊಂದಿರುವ ಪೋಷಕರಿರುವ, ಕಂದಾಯ ಇಲಾಖೆಯ ದೃಢೀಕರಣ ಹೊಂದಿರುವರನ್ನು ಎಪ್ರಿಲ್ 6ರಂದು ನಡೆಯುವ ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆಮಾಡಿಕೊಳ್ಳಲಾಗುವುದು.

ಆಸಕ್ತ ಅಭ್ಯರ್ಥಿಗಳು https//horticulturedir. karnataka.gov.in ಜಾಲತಾಣದ ಮೂಲಕ ಸಾಮಾನ್ಯ ಅಭ್ಯರ್ಥಿಗಳು 30 ರೂ ಹಾಗೂ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಅಭ್ಯರ್ಥಿಗಳು 15 ರೂ. ಗಳನ್ನು ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರ ಹೆಸರಿನಲ್ಲಿ ಪೋಸ್ಟಲ್ ಆರ್ಡರ್ ಅಥವಾ ಡಿ.ಡಿಯನ್ನು ಅರ್ಜಿಯೊಂದಿಗೆ ಲಗತ್ತಿಸಿ ಮಾರ್ಚ್ 30ರೊಳಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮತ್ತು ತಾಲೂಕಾ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

# ಪಾಕಿಸ್ತಾನ ಪರ ಘೋಷಣೆ: ಸತ್ಯಾಸತ್ಯತೆ ಬಹಿರಂಗಗೊಳಿಸಿ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯ ಸಭಾ ಚುನಾವಣೆಯಲ್ಲಿ ಜಯ ಗಳಿಸಿದ ನಾಸಿರ್ ಹುಸೇನ್ ಪರ ವಿಧಾನಸೌಧದಲ್ಲಿ ಘೋಷಣೆ ಕೂಗಿದ್ದನ್ನೇ ಪಾಕಿಸ್ತಾನ್ ಝಿಂದಾಬಾದ್ ಎಂದು ಕೂಗಲಾಗಿದೆ ಎಂದು ವಿರೋಧ ಪಕ್ಷಗಳು ರಾದ್ಧಾಂತ ಎಬ್ಬಿಸುತ್ತಿವೆ. ವಿಧಾನಸಭಾ ಕಲಾಪದ ಅಮೂಲ್ಯ ಸಮಯಹರಣ ಮಾಡಲಾಗುತ್ತಿದೆ. ಸಾರ್ವಜನಿಕರಿಗೆ ಈ ಪ್ರಕರಣದ ಸತ್ಯಾಸತ್ಯತೆ ಅರಿಯುವ ಕುತೂಹಲವಿದೆ. ಸರಕಾರ ಅದನ್ನು ಬಹಿರಂಗ ಗೊಳಿಸಬೇಕು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯ ಅಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಆಗ್ರಹಿಸಿದ್ದಾರೆ.

ಈ ಘೋಷಣೆ ಗಳ ವಾಸ್ತವದ ಬಗ್ಗೆ ತ್ವರಿತಗತಿಯಲ್ಲಿ ತನಿಖೆ ನಡೆಸಲು ಸಭಾಪತಿಗಳು ಆದೇಶಿಸಿ, ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇದರ ಹಿಂದಿನ ಶಕ್ತಿಗಳನ್ನು ಪತ್ತೆ ಹಚ್ಚಬೇಕು. ಒಂದು ವೇಳೆ ಕೆಲ ಮಾಧ್ಯಮಗಳು ಕಪೋಲಕಲ್ಪಿತ ಸುಳ್ಳು ಹರಡಿದ್ದರೆ ಅಂತಹ ಮಾಧ್ಯಮ ಸಂಸ್ಥೆಯ ವಿರುದ್ಧ ಸರಕಾರ ವಿಧಾನಸೌದದೊಳಗೆ ಪ್ರವೇಶಿಸದಂತೆ ನಿರ್ಬಂಧ ಹೇರಬೇಕು.

ವಿದಾನ ಸಭೆಯ ಕಲಾಪದ ಸಮಯ ವ್ಯರ್ಥವಾಗಲು ಕಾರಣವಾದ ಆ ವೆಚ್ಚವನ್ನು ಅವರಿಂದಲೇ ಭರಿಸಬೇಕು ಎಂದು ಅವರು ಹೇಳಿಕೆ ನೀಡಿದ್ದಾರೆ.

## ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಕಲ್ಯಾಣ ಇಲಾಖೆಯಿಂದ 2024-25ನೇ ಸಾಲಿನ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅನ್ಯೆರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಗಂಡು ಮಕ್ಕಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ನೀಡಲು ಹಾಗೂ ಮೈಸೂರಿನ ಯಾದವಗಿರಿಯ ರಾಮಕೃಷ್ಣ ವಿದ್ಯಾಶಾಲೆಯ 8ನೇ ತರಗತಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಮಾರ್ಚ್ 22 ರೊಳಗೆ ಉಪನಿರ್ದೇಶಕರ ಕಾರ್ಯಾಲಯ ಸಮಾಜ ಕಲ್ಯಾಣ ಇಲಾಖೆಗೆ ಅಗತ್ಯ ದಾಖಲಾತಿಯೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಾರ್ಯಾಲಯ ಸಮಾಜ ಕಲ್ಯಾಣ ಇಲಾಖೆ ಜಿಲ್ಲಾಡಳಿತ ಭವನ ರೂಂ ನಂ 107 ನ್ನು ಸಂರ್ಪಕಿಸಬಹುದಾಗಿದೆ.

## ತೋಟಗಾರಿಕೆ ಇಲಾಖೆಯಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ 2023-24ನೇ ಸಾಲಿನ ಹೈಬ್ರೀಡ್ ಹಾಗೂ ಸುಧಾರಿತ ತಳಿಯ ತರಕಾರಿ ಬೀಜಗಳನ್ನು ವಿತರಿಸಲು ರೋಣ ತಾಲೂಕಿನ ರೈತರಿಗೆ ಅರ್ಜಿ ಅಹ್ವಾನಿಸಲಾಗಿದೆ.

ಆಸಕ್ತ ನೀರಾವರಿ ಸೌಲಭ್ಯವಿರುವ ಸಣ್ಣ, ಅತಿ ಸಣ್ಣ ರೈತರು, ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಅಲ್ಪಸಂಖ್ಯಾತ, ಮಹಿಳಾ, ವಿಕಲಚೇತನ, ಸಾಮಾನ್ಯ ಪ್ರಸ್ತಕ ಸಾಲಿನ ಉತಾರ, ನೀರಾವರಿ ದೃಢೀಕರಣ, ಆಧಾರ್ ಕಾರ್ಡ್, ಮತದಾರರ ಚೀಟಿ, ಬ್ಯಾಂಕ್ ಪಾಸ್ ಬುಕ್ ಹಾಗೂ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡದ ರೈತರು ಜಾತಿ ಪ್ರಮಾಣ ಪತ್ರದ ನಕಲು ಪ್ರತಿಯನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ರೋಣ ಇವರಿಗೆ ಸಂರ್ಪಕಿಸಬಹುದಾಗಿದೆ.

### ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಭೆಯಲ್ಲಿ ಡಾ.ರಫೀ

## ಮಾ.3ರಂದು ಬೆಳಗಾವಿಯಲ್ಲಿ ರಾಜ್ಯಮಟ್ಟದ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಮಟ್ಟದ ಸರ್ಕಾರಿ ಮುಸ್ಲಿಂ ನೌಕರರ ಮಹಾಸಮ್ಮೇಳನ, ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳ ಹಾಗೂ ಶೈಕ್ಷಣಿಕ, ಔದ್ಯೋಗಿಕ ಯೋಜನೆಗಳ ಅರಿವು ಕಾರ್ಯಕ್ರಮ ಮಾ. 3ರಂದು ರವಿವಾರ ಬೆಳಗಾವಿಯ ಸನ್ಮಾನ ಹೋಟೇಲ್ ಬಳಿ ಇರುವ ಗಾಂಧಿ ಭವನದಲ್ಲಿ ನಡೆಯಲಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಸಿ.ಎಂ. ರಫೀ ಹೇಳಿದರು.

ಅವರು ಗುರುವಾರ ಗದಗ ಜಿಲ್ಲಾ ಘಟಕ ಏರ್ಪಡಿಸಿದ್ದ ಮಹಾಸಮ್ಮೇಳನದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಸಮ್ಮೇಳನವನ್ನು ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಬೆಳಗಾವಿ ಉತ್ತರ ಶಾಸಕ ಆಸಿಫ್ (ರಾಜು) ಸೇಠ್ ವಹಿಸುವರು. ಮುಖ್ಯ ಅತಿಥಿಗಳಾಗಿ ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್, ರಹೀಮ್‌ಖಾನ್, ಬಿ.ಝಡ್. ಜಮೀರ್ ಅಹ್ಮದ್‌ಖಾನ್, ಮಧು ಬಂಗಾರಪ್ಪ, ಶಾಸಕರಾದ ತನ್ವೀರ್ ಸೇಠ್, ಎನ್.ಎ. ಹಾರಿಸ್, ಕನೀಜ್ ಫಾತಿಮಾ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ವಿ.ಪ ಸದಸ್ಯ ಪ್ರಕಾಶ ಹುಕ್ಕೇರಿ, ರಾಜ್ಯಸಭಾ ಸದಸ್ಯ



ಡಾ.ಸೈಯದ್ ನಾಸಿರ್‌ಹುಸೇನ್ ಆಗಮಿಸುವರು.

ಗೌರವಾನ್ವಿತ ಅತಿಥಿಗಳಾಗಿ ವಿ.ಪ ಮುಖ್ಯ ಸಚೇತಕ ಸಲೀಮ್ ಅಹ್ಮದ್, ವಿ.ಪ ಸದಸ್ಯರಾದ ಕೆ.ಅಬ್ದುಲ್ ಜಬ್ಬಾರ್, ಮಾಜಿ ಶಾಸಕ ಫಿರೋಜ್ ಸೇಠ್, ರಾಜ್ಯ ವಕ್ಫ ಮಂಡಳಿ ಅಧ್ಯಕ್ಷ ಅನ್ವರ್ ಬಾಷಾ, ಶಾಸಕರಾದ ರಿಜ್ವಾನ್ ಅರ್ಶದ್, ಇಕ್ಬಾಲ್‌ಹುಸೇನ್, ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಅಬ್ದುಲ್ ಅಜೀಮ್, ಮಾಜಿ ಸಚಿವರಾದ ಅಬ್ದುಲ್ ಹಕೀಮ್ ಹಿಂಡಸಗೇರಿ ಸೇರಿದಂತೆ ಚುನಾಯಿತ ಜನಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು, ಕೆಎಸ್‌ಜಿ/ಎಂ.ಇ.ಡಬ್ಲ್ಯೂ.ಎ (ಮೇವಾ) ಸಂಘಟನೆಯ ರಾಜ್ಯ ಹಾಗೂ ಜಿಲ್ಲಾ ಪದಾಧಿಕಾರಿಗಳು, ಸಮಾಜ ಮುಖಂಡರು ಪಾಲ್ಗೊಳ್ಳುವರು.

ಸಮ್ಮೇಳನದಲ್ಲಿ ಉತ್ತಮ ಕಾರ್ಯ ನಿರ್ವಹಿಸಿದ ಜಿಲ್ಲಾಧ್ಯಕ್ಷ ಮತ್ತು ಕಾರ್ಯದರ್ಶಿಗಳಿಗೆ ಸನ್ಮಾನ ನಡೆಯಲಿದ್ದು, ಗದಗ ಜಿಲ್ಲೆಯ ಸಮಸ್ತ ಸರ್ಕಾರಿ ಮುಸ್ಲಿಂ ನೌಕರರು ಸಮ್ಮೇಳನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಡಾ. ಸಿ.ಎಂ. ರಫೀ ವಿನಂತಿಸಿದರು.

> ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ನೌಕರರ ಕ್ಷೇಮಾಭಿವೃದ್ಧಿ ಸಂಘ ಬೆಂಗಳೂರು ಹಾಗೂ ಜಿಲ್ಲಾ ಘಟಕ ಬೆಳಗಾವಿ ಘಟಕದ ಸಂಯುಕ್ತ ಆಶ್ರಯದಲ್ಲಿ ಮಹಾ ಸಮ್ಮೇಳನ ನಡೆಯಲಿದ್ದು, ರಾಜ್ಯದಾದ್ಯಂತ ಸರ್ಕಾರಿ ಮುಸ್ಲಿಂ ನೌಕರರು ಪಾಲ್ಗೊಳ್ಳಲಿದ್ದಾರೆ. ಗದಗ ಜಿಲ್ಲೆಯ ಸರ್ಕಾರಿ ಮುಸ್ಲಿಂ ನೌಕರರು ಸಮ್ಮೇಳನದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿಕೊಂಡರು.

ರಾಜ್ಯ ಘಟಕದ ಉಪಾಧ್ಯಕ್ಷ ನಿಯಾಜ್ ಅಹ್ಮದ್ ಹಂಚಿನಮನಿ, ಪ್ರಧಾನ ಕಾರ್ಯದರ್ಶಿ ರಶೀದ್, ಮೆಹಬೂಬ ತಾಳಿಕೋಟಿ, ಅಬ್ದುಲ್ ಮುನ್ನಾಫ ಬಿಜಾಪುರ, ಮೋದಿನಸಾಬ ಬುಕ್ಕಿಟಗಾರ ಮುಂತಾದವರು ಉಪಸ್ಥಿತರಿದ್ದರು.

ರಾಜ್ಯ ಘಟಕದ ಉಪಾಧ್ಯಕ್ಷ ನಿಯಾಜ್ ಅಹ್ಮದ್ ಹಂಚಿನಮನಿ, ಉಪಾಧ್ಯಕ್ಷ ಎ.ಎಲ್. ಬಿಜಾಪೂರ, ಪ್ರಧಾನ ಕಾರ್ಯದರ್ಶಿ ರಶೀದ್, ಸಂಘಟನಾ ಕಾರ್ಯದರ್ಶಿ ಮೆಹಬೂಬ ತಾಳಿಕೋಟಿ, ಮೋದಿನಸಾಬ ಬುಕ್ಕಿಟಗಾರ ಸೇರಿದಂತೆ ಇತರ ಪದಾಧಿಕಾರಿಗಳು ಕಾರ್ಯಕಾರಿ ಮಂಡಳಿ ಸದಸ್ಯರು ಸಭೆಯಲ್ಲಿದ್ದು ಸಲಹೆ ಸೂಚನೆ ನೀಡಿದರು.

## ಶಾಲಾಭಿವೃದ್ಧಿಗೆ ಕೈಜೋಡಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾ ಅಭಿವೃದ್ಧಿ ಹಾಗೂ ಉಸ್ತುವಾರಿ ಸಮಿತಿಯು ಸರಕಾರಿ ಶಾಲೆಗಳಿಗೆ ಬೆನ್ನೆಲುಬು ಇದ್ದಂತೆ. ಸಮಿತಿಯ ಸದಸ್ಯರು ಶಾಲೆಯ ಅಗತ್ಯತೆಗಳಿಗೆ ಸ್ಪಂದಿಸಿ ಶಾಲಾ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಗದುಗಿನ ಆದರ್ಶನ ನಗರದ ಸ.ಹಿ.ಪ್ರಾ.ಶಾ ನಂ. 9ರಲ್ಲಿ ಜರುಗಿದ ಶಾಲಾ ಎಸ್‌ಡಿಎಂಸಿ ಸದಸ್ಯರ ಸಭೆಯಲ್ಲಿ ಮಾತನಾಡಿದರು.

ಪಾಲಕರು, ಪೋಷಕರು ತಮ್ಮ ಮಕ್ಕಳು ಶಾಲೆ ಬಿಡದಂತೆ ಕ್ರಮ ವಹಿಸಬೇಕು. ಮೊಬೈಲ್ ಹಾಗೂ ಟಿ.ವ್ಹಿ ಗೀಳಿನಿಂದ ಮಕ್ಕಳನ್ನು ದೂರವಿರಿಸಿ ಪಠ್ಯ-ಪುಸ್ತಕದತ್ತ ಗಮನ ಹರಿಸುವಂತೆ ಮಾಡಬೇಕು. ಪರೀಕ್ಷೆಗಳು ಹತ್ತಿರವಾಗುತ್ತಿರುವ ಈ ಸಮಯದಲ್ಲಿ ಮಕ್ಕಳ ಆರೋಗ್ಯ ರಕ್ಷಣೆ ಮುಖ್ಯವಾಗಿದೆ. ಪಾಲಕರು ಈ ಎಲ್ಲ ಅಂಶಗಳನ್ನು ಮನನ ಮಾಡಿಕೊಳ್ಳಬೇಕೆಂದರು.

ಎಸ್‌ಡಿಎಂಸಿ ಅಧ್ಯಕ್ಷೆ ಶೋಭಾ ಬಾಣಾಪೂರ ಮಾತನಾಡಿ, ನಮ್ಮ ಶಾಲೆ ನಮ್ಮೆಲ್ಲರ ಹೆಮ್ಮೆಯ ಶಾಲೆಯಾಗಿದೆ. ನಮ್ಮ ಮಕ್ಕಳು ಇಲ್ಲಿ ಶಿಕ್ಷಣ ಪಡೆಯುತ್ತಿರುವುದರಿಂದ ನಾವು ಶಾಲೆಯೊಂದಿಗೆ ಸದಾ ಸಂಪರ್ಕದಲ್ಲಿದ್ದು ಕೈಲಾದ ಮಟ್ಟಿಗೆ ಸಹಾಯ ಮಾಡೋಣ ಎಂದರು.

ಮುಖ್ಯೋಪಾಧ್ಯಾಯಿನಿ ತಾರಾ ಪಾಟೀಲ ಸ್ವಾಗತಿಸಿದರು. ವಿದ್ಯಾ ಗಡ್ಯಾಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್.ಡಿ. ಚಿತ್ತಾಮೂರ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಎಸ್‌ಡಿಎಂಸಿ ಉಪಾಧ್ಯಕ್ಷ ಅಶೋಕ ಯಲಿಗಾರ, ವಜ್ರಾ ರೇವಣಕಿ, ದೇವಕ್ಕ ಕುರ್ತಕೋಟಿ, ವಿಜಯಲಕ್ಷ್ಮೀ ಗುಡ್ಡಟ್ಟಿ, ದೀಪಾ ತಾಳಿಕೋಟಿ, ಮಂಜುಳಾ ಮಳಗಿ, ಮುಂತಾದವರು ಉಪಸ್ಥಿತರಿದ್ದರು.

### ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನಿಂದ ಪರೀಕ್ಷೆ-ಸಿದ್ಧತೆ ಕಾರ್ಯಕ್ರಮ

## ಪರೀಕ್ಷೆಯನ್ನು ನಿರ್ಭೀತಿಯಿಂದ ಎದುರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರೀಕ್ಷೆಗಳನ್ನು ನಗು ಮುಖದಿಂದ ಸ್ವೀಕರಿಸಿ ಯಾವುದನ್ನೂ ಸಮಸ್ಯೆ ಎಂದು ತಿಳಿಯದೇ, ಕ್ಲಿಷ್ಟಕರ ಎನ್ನಿಸಿದ್ದನ್ನು ಸಮರ್ಥವಾಗಿ ನಿಭಾಯಿಸಿ ಯಶಸ್ಸು ಕಾಣುವುದೇ ಪರೀಕ್ಷೆಯ ಗುಟ್ಟು ಎಂದು ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ ಹೇಳಿದರು.

ಅವರು ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನಿಂದ ಗದಗ ಶಹರದ ಎಸ್.ಎಂ. ಕೃಷ್ಣಾ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಮಕ್ಕಳಿಗೆ ಏರ್ಪಡಿಸಿದ್ದ 'ಪರೀಕ್ಷೆಗಳು-ಸಿದ್ಧತೆಗಳು' ಕಾರ್ಯಕ್ರಮದಲ್ಲಿ ಅತಿಥಿಯಾಗಿ ಮಾತನಾಡಿದರು.

ಮಕ್ಕಳು ಪರೀಕ್ಷೆಯ ಬಗೆಗೆ ಭಯಭೀತರಾಗದೇ ನಿರ್ಭೀತಿಯಿಂದ, ಹಸನ್ಮುಖಿಯಾಗಿ ಓದಿನಲ್ಲಿ ತೊಡಗಬೇಕು.



ನಿರ್ದಿಷ್ಠ ಓದು, ವಿಷಯಗಳ ಮನನ ಅರ್ಥೈಸಿಕೊಳ್ಳುವಿಕೆ ಮುಖ್ಯವಾಗಿದ್ದು, ಪರೀಕ್ಷೆಯ ಫಲಿತಾಂಶದಲ್ಲಿ ಇದು ಪ್ರಮುಖವಾಗಿದೆ ಎಂದರಲ್ಲದೆ ಕ್ಲಬ್‌ನಿಂದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಕಂಪಾಸ್ ಬಾಕ್ಸ್ ಹಾಗೂ ಪೆನ್ನುಗಳನ್ನು ವಿತರಿಸಿ ಶುಭ ಕೋರಿದರು.

ಉದ್ಘಾಟನೆ ನೆರವೇರಿಸಿ ಮಾತನಾಡಿದ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎಸ್. ಬುರಡಿ, ಮಕ್ಕಳು ಓದುವುದೆಂದರೆ ಕೇವಲ ಕಾಟಾಚಾರವಲ್ಲ, ಪ್ರಶ್ನೆಗಳನ್ನು ಓದಿಕೊಂಡು ಯಾವ ಪ್ರಶ್ನೆಗೆ ಅಂಕಗಳೆಷ್ಟು ಎಂಬುದನ್ನು ತಿಳಿದು ಉತ್ತರಿಸಬೇಕು ಎಂದರು.

ಕ್ಲಬ್ ಕಾರ್ಯದರ್ಶಿ ಪ್ರವೀಣ ವಾರಕರ್ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳು ಓದಿಗಾಗಿ ಸಮಯ ನಿಗಿದಿಪಡಿಸಿಕೊಂಡು ಅದನ್ನು ಸದುಪಯೋಗ ಮಾಡಿಕೊಳ್ಳಬೇಕು. ಆರೋಗ್ಯ ಜಾಗೃತಿ, ಸಮತೋಲಿತ ಆಹಾರ ಸೇವನೆ ಮುಖ್ಯ ಎಂದರು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪದಾಧಿಕಾರಿಗಳಾದ ಡಾ.ಶ್ರೀಧರ ಕುರಡಗಿ, ಡಾ.ಸಂತೋಷ ಹುಯಿಲಗೋಳ, ಡಾ.ರಾಜಶೇಖರ ಪಾಟೀಲ, ಡಾ.ಜಯರಾಜ ಪಾಟೀಲ, ಅನಿಲ ಕುಷ್ಟಗಿ, ಅರವಿಂದ ಪಟೇಲ್, ಅಮೀಚಂದ, ಅರುಣ ಮಿಸ್ಕಿನ್ ಕಾರ್ಯಕ್ರಮದ ಪ್ರಾಯೋಜಕತ್ವ ವಹಿಸಿಕೊಂಡಿದ್ದರು.

ವೇದಿಕೆಯ ಮೇಲೆ ಶಿಕ್ಷಣ ಸಂಯೋಜಕರಾದ ಶ್ಯಾಮ್ ಲಾಂಡೆ, ವ್ಹಿ.ಸಿ. ಪಾಟೀಲ, ಎನ್.ಬಿ. ಕಿತ್ತೂರ ಉಪಸ್ಥಿತರಿದ್ದರು. ಶಿಕ್ಷಕಿ ಗೀತಾಂಜಲಿ ಗೌಡರ ಪ್ರಾರ್ಥಿಸಿದರು, ಜ್ಯೋತಿ ಶೆಟ್ಟರ ಸ್ವಾಗತಿಸಿದರು. ಕವಿತಾ ಬೇಲೇರಿ ನಿರೂಪಿಸಿದರು ಎಂ.ಕೆ. ಹಾದಿಮನಿ ಪರಿಚಯಿಸಿದರು. ಅನ್ನಪೂರ್ಣ ಗೋಣಿ ನಿರ್ವಹಿಸಿದರು. ಅನಿಲ ಕುಷ್ಟಗಿ ವಂದಿಸಿದರು.

### ಸಾರಿಗೆ ನಿಯಂತ್ರಕ ಶಶಿಧರ ಕೊಡಕೇರಿ ಅವರಿಗೆ ಬೀಳ್ಕೊಡುಗೆ

## ಪ್ರಯಾಣಿಕರೇ ಸಾರಿಗೆ ಸಂಸ್ಥೆಯ ಜೀವಾಳ

■ವಿಜಯಸಾಕ್ಷಿ ಸುದ್ದಿ, ಗದಗ

ರಸ್ತೆ ಸಾರಿಗೆ ನೌಕರರು ಕರ್ತವ್ಯ ನಿರ್ವಹಣೆಯಲ್ಲಿ ಸಾರ್ವಜನಿಕರಿಗೆ ಗೌರವದಿಂದ ವರ್ತಿಸುವ ಮೂಲಕ ದಕ್ಷತೆ ಮತ್ತು ಪ್ರಾಮಾಣಿಕತೆಯಿಂದ ಸೇವೆ ನೀಡಬೇಕೆಂದು ವಾ.ಕ.ರ.ಸಾ ಸಂಸ್ಥೆಯ ಗದಗ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ. ದೇವರಾಜ ಅಭಿಪ್ರಾಯಪಟ್ಟರು.

ಅವರು ಗುರುವಾರ ಗದಗ ಹೊಸ ಬಸ್‌ನಿಲ್ದಾಣದ ಸಭಾಂಗಣದಲ್ಲಿ ಸೇವಾ ನಿವೃತ್ತರಾದ ಸಾರಿಗೆ ನಿಯಂತ್ರಕ ಶಶಿಧರ ಕೊಡಕೇರಿ ಅವರಿಗೆ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾರಿಗೆ ನೌಕರರಲ್ಲಿ ಅದರಲ್ಲೂ ವಿಶೇಷವಾಗಿ ಬಸ್ ಡ್ರೈವರ್, ಕಂಡಕ್ಟರ್ ಹಾಗೂ ಕಂಟ್ರೋಲರ್ ಪ್ರಯಾಣಿಕರೊಂದಿಗೆ ತಾಳ್ಮೆ, ಸಹನೆಯಿಂದ ವರ್ತಿಸಬೇಕು.



ಪ್ರಯಾಣಿಕರಿಗೆ ಸಹಕಾರ ನೀಡಿ ಅಗತ್ಯ ಮಾಹಿತಿ ನೀಡಬೇಕು, ಪ್ರಯಾಣಿಕರೇ ಸಂಸ್ಥೆಯ ಜೀವಾಳ ಎಂದರು.

ಗದಗ ಹೊಸ ಬಸ್‌ನಿಲ್ದಾಣದಲ್ಲಿ ಸಾರಿಗೆ ನಿಯಂತ್ರಕರಾಗಿ ಸೇವೆ ಸಲ್ಲಿಸಿ ಸೇವಾ ನಿವೃತ್ತರಾಗುತ್ತಿರುವ ಕೊಡಕೇರಿ ಅವರ ನಿವೃತ್ತಿಯ ಬದುಕು ನೆಮ್ಮದಿಯಿಂದ ಕೂಡಿರಲಿ, ನಿವೃತ್ತಿಯ ಬಳಿಕ ಅವರಿಗೆ ಸಂಸ್ಥೆಯಿಂದ ಸಿಗಬಹುದಾದ ಸೌಲಭ್ಯಗಳನ್ನು ಕಾನೂನಿನ ಚೌಕಟ್ಟಿಗೊಳಪಟ್ಟು ಪೂರೈಸುವದಾಗಿ ಹೇಳಿದರಲ್ಲದೆ ಶಶಿಧರ ಕೊಡಕೇರಿ-ಶ್ರೀಮತಿ ಪ್ರೇಮಾ ಕೊಡಕೇರಿ ದಂಪತಿಗಳನ್ನು ಸನ್ಮಾನಿಸಿ ಶುಭ ಕೋರಿದರು.

> ಸನ್ಮಾನ ಸ್ವೀಕರಿಸಿ ಮಾತನಾಡಿದ ಕೊಡಕೇರಿ, ಸಂಸ್ಥೆ ನನಗೆ ಉದ್ಯೋಗ ಕೊಟ್ಟು ನನ್ನ ಭವಿಷ್ಯವನ್ನು ರೂಪಿಸಿದೆ. ಸಂಸ್ಥೆಯನ್ನು ಮರೆಯಲಾರೆ ಎಂದರಲ್ಲದೆ ಸಾರಿಗೆ ಸಂಸ್ಥೆಯಲ್ಲಿ ತಾಳ್ಮೆ, ಸಹನೆ ಮುಖ್ಯವಾಗಿದ್ದು, ಹೊಸ ತಲೆಮಾರಿನ ನೌಕರರು ಇದನ್ನು ರೂಢಿಸಿಕೊಳ್ಳಬೇಕೆಂದರು.

ನಿವೃತ್ತ ಅಧಿಕಾರಿ ಪಿ.ಎಂ. ತೆರದಾಳ, ಮಲ್ಲಪ್ಪ ಹೊಸೂರ, ಭೀಮಪ್ಪ ಆಸಂಗಿ, ಗಣೇಶ ಕೊಡಕೇರಿ ಮಾತನಾಡಿದರು. ವೇದಿಕೆಯ ಮೇಲೆ ಸಂಸ್ಥೆಯ ವಿಭಾಗೀಯ ಸಂಚಲನಾಧಿಕಾರಿ ಪಿ.ವೈ. ಗಡೇದ, ಕಾರ್ಮಿಕ ಮುಖಂಡರಾದ ಶಾಂತಣ್ಣ ಮುಳವಾಡ, ಎಂ.ಆಂಜನೇಯ, ಎಸ್.ಕೆ. ಅಯ್ಯನಗೌಡ್ರ, ಬಿ.ಎಚ್. ರಾಮೇನಹಳ್ಳಿ, ಯು.ಟಿ. ಕುಲಕರ್ಣಿ ಮುಂತಾದವರು ಉಪಸ್ಥಿತರಿದ್ದರು.

ಯಮನೂರ ಹಳ್ಳಿ ಸ್ವಾಗತಿಸಿದರು. ಸಂತೋಷ ಕುಲಕರ್ಣಿ ನಿರೂಪಿಸಿದರು. ಎಸ್. ಕೆ. ಅಯ್ಯನಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂ.ಆಂಜನೇಯ ವಂದಿಸಿದರು. ಸಮಾರಂಭದಲ್ಲಿ ಸಾರಿಗೆ ಸಂಸ್ಥೆಯ ಕಾರ್ಮಿಕ ಮುಖಂಡರು, ನೌಕರರು, ಕೊಡಕೇರಿ ಕುಟುಂಬದವರು, ಅಭಿಮಾನಿಗಳು ಪಾಲ್ಗೊಂಡಿದ್ದರು.

## ಇಂದು ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ , ಇವರ ಸಂಯುಕ್ತ ಆಶ್ರಯದಲ್ಲಿ 2023-24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ದೆಗಳ ಉದ್ಘಾಟನಾ ಸಮಾರಂಭವು ಮಾರ್ಚ್ 1 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರಾದ ಬಿ. ನಾಗೇಂದ್ರ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಶ್ರೀಮತಿ ಸುನಂದಾ ಬಾಕಳೆ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಹಕಾರ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಎನ್. ಮಂಜುನಾಥ್ ಪ್ರಸಾದ, ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ವಾಣಿಜ್ಯ ತೆರಿಗೆ ಆಯುಕ್ತರಾದ ಶ್ರೀಮತಿ ಸಿ ಶಿಖಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಎನ್. ಶಶಿಕುಮಾರ್ , ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಆಗಮಿಸುವರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ರವಿ ಗುಂಜೀಕರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

## ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಯಲಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರಾಥಮಿಕ ಹಂತದಲ್ಲಿಯೇ ಮಕ್ಕಳು ವೈಜ್ಞಾನಿಕ ಮನೋಭಾವನೆ ಬೆಳೆಸಿಕೊಳ್ಳಬೇಕು ಎಂದು ವಿಜ್ಞಾನ ಶಿಕ್ಷಕಿ ವಿ.ಎಂ. ಕಂಠಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.




ವಿದ್ಯಾರ್ಥಿಗಳು ವಿಜ್ಞಾನ ವಿಷಯದಲ್ಲಿ ಹೆಚ್ಚಿನ ಆಸಕ್ತಿ ವಹಿಸಿ, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಬೇಕು. ನಮ್ಮ ಶಾಲೆಯ ವಿಜ್ಞಾನ ಪ್ರಯೋಗಾಲಯವಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಅಧ್ಯಕ್ಷತೆಯನ್ನು ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ ವಹಿಸಿದ್ದರು. ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್, ಎಚ್. ಆರ್. ಭಜಂತ್ರಿ, ಎಸ್.ಎಚ್. ಉಪ್ಪಾರ, ವೀಣಾ.ಟಿ, ಎಸ್.ವಿ. ಹಿರೇಮಠ, ಎಸ್.ಡಿ. ಪಂಡಿತ, ನಂದಾ ಮಟ್ಟಿ, ಪವಿತ್ರಾ ಮಟ್ಟಿ, ಜ್ಯೋತಿ ಜಾಧಾವ, ಶಭಾನಾ ಡಾಲಾಯತ ಇದ್ದರು.

## ಕೆ.ಎಸ್. ಶಿವರಾಮ ನಿಧನಕ್ಕೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮೊದಲ ಬಾರಿಗೆ ಕನ್ನಡದಲ್ಲಿ ಐಎಎಸ್ ಪರೀಕ್ಷೆ ಬರೆದು ಐಎಎಸ್ ಅಧಿಕಾರಿಯಾಗಿ ಕರ್ನಾಟಕ ರಾಜ್ಯದಲ್ಲಿ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳಾಗಿ ಹಾಗೂ ರಾಜ್ಯ ಸರ್ಕಾರದ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದ ಕೆ.ಎಸ್. ಶಿವರಾಮ ಅವರ ನಿಧನಕ್ಕೆ ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾಧ್ಯಕ್ಷ ರಾಘವೇಂದ್ರ



ಪಿ.ಪರಾಪೂರ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.

ಕರ್ನಾಟಕ ಇತಿಹಾಸದಲ್ಲಿ ಕನ್ನಡದಲ್ಲಿಯೇ ಐಎಎಸ್ ಪರೀಕ್ಷೆ ಬರೆದು ಪಾಸಾದ ಮೊದಲಿಗರು. ಅದರಲ್ಲೂ ದಲಿತ ಸಮುದಾಯಕ್ಕೆ ಸೇರಿದವರಾಗಿದ್ದು, ನಮ್ಮ ದಲಿತ ಸಮುದಾಯಕ್ಕೆ ಹೆಮ್ಮೆಯ ವಿಷಯವಾಗಿತ್ತು. ಅವರು ತಮ್ಮ ಸೇವೆಯಲ್ಲಿ ಉನ್ನತ ಅಧಿಕಾರಿಯಾಗಿ ಅವಿಸ್ಮರಣೀಯ ಸೇವೆ ಸಲ್ಲಿಸಿ ಜನಪ್ರಿಯ ಅಧಿಕಾರಿಯಾಗಿದ್ದರು. ಅವರ ಮಾರ್ಗದರ್ಶನ ನಮ್ಮ ದಲಿತ ಯುವ ಸಮುದಾಯಕ್ಕೆ ಇನ್ನೂ ಸಿಗಬೇಕಿತ್ತು ಎಂದಿದ್ದಾರೆ.

## ಸದಸ್ಯತ್ವ ನವೀಕರಣ, ಹೊಸ ಸದಸ್ಯತ್ವ ಪ್ರಕ್ರಿಯೆ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ 2024-25ನೇ ಸಾಲಿನ ಸದಸ್ಯತ್ವ ನವೀಕರಣ ಹಾಗೂ ಹೊಸ ಸದಸ್ಯತ್ವ ಪಡೆಯುವ ಪ್ರಕ್ರಿಯೆ ಆರಂಭವಾಗಿದೆ.

ಮುಳಗುಂದ ರಸ್ತೆಯ 'ಪತ್ರಿಕಾ ಭವನ'ದಲ್ಲಿ ಸದಸ್ಯತ್ಯ ಹಾಗೂ ನವೀಕರಣಕ್ಕೆ ಅಗತ್ಯ ಅರ್ಜಿಗಳನ್ನು ಪಡೆದು, ಭರ್ತಿ ಮಾಡಿ, ನಿಗದಿಪಡಿಸಿದ ಅರ್ಜಿ ಶುಲ್ಕ 10 ರೂ. ಹಾಗೂ ಸದಸ್ಯತ್ವ/ನವೀಕರಣ ಶುಲ್ಕ 500 ರೂ. ಸೇರಿ ಒಟ್ಟು 510 ರೂ. ಪಾವತಿಸಿ ಅಗತ್ಯ ದಾಖಲೆಗಳೊಂದಿಗೆ ನೀಡಬೇಕು.

ಕ್ರಿಯಾಶೀಲರಾಗಿ ಕೆಲಸ ನಿರ್ವಹಿಸುವ ಮತ್ತು ಆರ್‌ಎನ್‌ಐ ಸಂಖ್ಯೆ ಹೊಂದಿರುವ ದಿನಪತ್ರಿಕೆಗಳು ಕಡ್ಡಾಯವಾಗಿ ಕನಿಷ್ಟ ಎರಡು ವರ್ಷ ಪೂರೈಸಿ, ನಿಯಮಿತವಾಗಿ ಎರಡು ವರ್ಷ ಕಡ್ಡಾಯವಾಗಿ ಪ್ರಕಟಗೊಂಡಿದ್ದಲ್ಲಿ ಮಾತ್ರ ಅಂತಹ ಸಂಸ್ಥೆಗಳ ಪತ್ರಕರ್ತರು ಸದಸ್ಯತ್ವ ಪಡೆಯಲು ಅರ್ಹರು. ಅರ್ಜಿ ಪಡೆದು, ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಮಾ.10 ರೊಳಗೆ ಸಲ್ಲಿಸಬೇಕು. ಸದಸ್ಯತ್ವ/ನವೀಕರಣ ಅರ್ಜಿ ಹಾಗೂ ಸದಸ್ಯತ್ವ ಪಡೆಯಲು ಇರುವ ನಿಯಮಗಳ ಬಗ್ಗೆ ಪತ್ರಿಕಾ ಭವನದ ಫಲಕದಲ್ಲಿ ಅಳವಡಿಸಲಾಗಿದೆ. ಪ್ರತಿದಿನ ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಅರ್ಜಿ ಪಡೆಯಲು ಮತ್ತು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಬಹುದು.

ಸದಸ್ಯತ್ವ ಅರ್ಜಿಗೆ ಮಾರ್ಗಸೂಚಿಗಳು: ಜಿಲ್ಲಾ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಪತ್ರಕರ್ತರನ್ನು ಹೊರತುಪಡಿಸಿ ಲಕ್ಷ್ಮೇಶ್ವರ, ಮುಂಡರಗಿ, ಶಿರಹಟ್ಟಿ, ನರಗುಂದ, ಗಜೇಂದ್ರಗಡ ಹಾಗೂ ರೋಣ ತಾಲೂಕಿನ ಸದಸ್ಯರು ಆಯಾ ತಾಲೂಕಿನ ಅಧ್ಯಕ್ಷರ ಬಳಿಯೇ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ. ಉಳಿದಂತೆ ನರೇಗಲ್ಲ ಹಾಗೂ ಮುಳಗುಂದ ಹೋಬಳಿಯ ಸದಸ್ಯರು ಸ್ಥಳೀಯ ಹೋಬಳಿ ಘಟಕದ ಅಧ್ಯಕ್ಷರ ಮೂಲಕ ಸಲ್ಲಿಸಬೇಕು. ಆಯಾ ತಾಲೂಕು ಘಟಕದವರೇ 'ಪಟ್ಟಿ ಸಿದ್ಧಪಡಿಸಿ', ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಸಂಘಕ್ಕೆ ಕಳುಹಿಸಿ ಕೊಡಬೇಕು.

ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9845181281 ಸಂಪರ್ಕಿಸಲು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಚಾರ ನಿಯಮ ಪಾಲನೆ, ಅಪರಾಧ ತಡೆಗೆ ಪೊಲೀಸ್ ಇಲಾಖೆಯ ಹೆಜ್ಜೆ

## ಇಂದಿನಿಂದ ನರೇಗಲ್ಲದಲ್ಲಿ 'ಥರ್ಡ್ ಐ' ಕಾರ್ಯಾಚರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪೊಲೀಸ್ ಇಲಾಖೆಯ ಮೂರನೇ ಕಣ್ಣು (ಥರ್ಡ್ ಐ) ಮಾರ್ಚ್ 1ರಿಂದ ನರೇಗಲ್ಲಿನಲ್ಲಿಯೂ ಕಾರ್ಯಾರಂಭ ಮಾಡಲಿದ್ದು, ಅದು ನಿಮ್ಮನ್ನೇ ನೋಡಲಿದೆ ಎಂದು ರೋಣ ಸಿಪಿಐ ಎಸ್.ಎಸ್. ಬೀಳಗಿ ಹೇಳಿದರು.

ಅವರು ನರೇಗಲ್ಲದ ದುರ್ಗಾ ವೃತ್ತದಲ್ಲಿ ಗುರುವಾರ ವಾಹನ ಸವಾರರಿಗೆ ಗುಲಾಬಿ ಹೂ ನೀಡಿ ಈ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇನ್ನುಮುಂದೆ ನರೇಗಲ್ಲ ಪಟ್ಟಣದಲ್ಲಿ ವಾಹನ ಸವಾರರು ಯಾರೂ ಹೆಲ್ಮೆಟ್ ಧರಿಸದೆ ಸಂಚರಿಸುವಂತಿಲ್ಲ. ಹೆಲ್ಮೆಟ್ ಇಲ್ಲದೆ ಬೈಕ್ ಚಲಾಯಿಸುತ್ತಿರುವ ದೃಶ್ಯ ಥರ್ಡ್ ಐ ಕ್ಯಾಮೆರಾದಲ್ಲಿ ಸೆರೆಯಾದರೆ ನೇರವಾಗಿ ನಿಮ್ಮ ವಿಳಾಸಕ್ಕೆ 500 ರೂ. ದಂಡದ ನೋಟೀಸ್ ಬರುತ್ತದೆ. ನೀವೇನಾದರೂ ಬೇರೆಯವರಿಗೆ ವಾಹನ ಕೊಟ್ಟು ಕಳಿಸಿದಾಗ, ಅವರು ಹೆಲ್ಮೆಟ್ ಧರಿಸದಿದ್ದರೆ ಆಗಲೂ ದಂಡವನ್ನು ವಾಹನ ಮಾಲೀಕರೇ ಕಟ್ಟಬೇಕು. ಪ್ರತಿ ಬಾರಿಯೂ ನೀವು 500 ರೂಪಾಯಿ ದಂಡ ಕಟ್ಟಬೇಕಾಗುತ್ತದೆ. ಹೀಗಾಗಿ ಯಾರ ಕೈಲಾದರೂ ವಾಹನ ಕೊಡುವ ಮುನ್ನ, ಅಪ್ರಾಪ್ತರ ಕೈಯಲ್ಲಿ ವಾಹನ ಕೊಡುವ ಮುನ್ನ ಜಾಗರೂಕರಾಗಿರಬೇಕು. ತ್ರಿಬಲ್ ರೈಡಿಂಗ್‌ಗೂ 500 ರೂ. ದಂಡ ಕಟ್ಟಬೇಕಾಗುತ್ತದೆ. ವಾಹನ ಚಲಾಯಿಸುತ್ತಿದ್ದಾಗ ನೀವು ಮೊಬೈಲ್ ಬಳಸುವುದು ಕಂಡುಬಂದರೆ ಅದಕ್ಕೂ 500 ರೂ. ದಂಡವಿದೆ ಎಂದು ಹೇಳಿದರು.


ಕಾರು ಚಾಲಕರು ಬೆಲ್ಟ್ ಧರಿಸದೆ ಕಾರ್ ಚಾಲನೆ ಮಾಡುತ್ತಿದ್ದರೆ 1000 ರೂ. ದಂಡ ಕಟ್ಟಬೇಕಾಗುತ್ತದೆ. ಈ ಥರ್ಡ್ ಐ ಕ್ಯಾಮೆರಾವನ್ನು ಕೇವಲ ಸಾರಿಗೆ ನಿಯಮ ಉಲ್ಲಂಘಿಸುವರಿಗೆ ದಂಡ ಕಟ್ಟಲು ಮಾತ್ರವಲ್ಲದೆ, ಅಪರಾಧಗಳನ್ನು ತಡೆಯುವದಕ್ಕಾಗಿ, ಅಪರಾಧಿಗಳನ್ನು ಪತ್ತೆ ಹಚ್ಚುವದಕ್ಕಾಗಿ ಬಳಸಲಾಗುತ್ತದೆ. ಸಾರ್ವಜನಿಕರ ಪ್ರಾಣ ರಕ್ಷಣೆಯ ಜೊತೆಗೆ, ಸಾರಿಗೆ ನಿಯಮಗಳನ್ನು ತಿಳಿಸುವದಕ್ಕೆ ಮತ್ತು ಅಪರಾಧಗಳ ಸಂಖ್ಯೆಯನ್ನು ಕಡಿಮೆ ಮಾಡುವದಕ್ಕೆ ಈ ಕ್ಯಾಮೆರಾ ಸಹಾಯಕವಾಗಲಿದೆ ಎಂದು ತಿಳಿಸಿದ ಸಿಪಿಐ ಬೀಳಗಿ, ಈ ಕಾರ್ಯಕ್ಕೆ ಸಾರ್ವಜನಿಕರೂ ಸಹ ಪೊಲೀಸ್ ಇಲಾಖೆಯ ಜೊತೆಗೆ ಸಹಕರಿಸಿ ಕಾನೂನು ಪಾಲನೆಯಲ್ಲಿ ತೊಡಗಬೇಕೆಂದು ತಿಳಿಸಿದರು.

ನರೇಗಲ್ಲ ಠಾಣೆಯ ಪಿಎಸ್‌ಐ ಶಿವಾನಂದ ಬನ್ನಿಕೊಪ್ಪ ಮಾತನಾಡಿ, ಜಿಲ್ಲಾ ವ್ಯಾಪ್ತಿಯ ಪ್ರತಿ ಠಾಣೆಯಲ್ಲಿಯೂ 'ಥರ್ಡ್ ಐ' ಅಳವಡಿಸಬೇಕೆಂಬ ಸರಕಾರದ ಆದೇಶದಂತೆ ಇಲ್ಲಿಯೂ ಥರ್ಡ್ ಐ ಅಳವಡಿಸಲಾಗಿದೆ. ನರೇಗಲ್ಲ ಪಟ್ಟಣದಲ್ಲಿ ಇನ್ನೂ ಮೂರು-ನಾಲ್ಕು ಕಡೆಗಳಲ್ಲಿ ಈ ಕ್ಯಾಮೆರಾಗಳನ್ನು ಕ್ರಮೇಣ ಅಳವಡಿಸಲಾಗುತ್ತಿದ್ದು, ಇಂದು ಮೊದಲ ಕ್ಯಾಮೆರಾವನ್ನು ಉದ್ಘಾಟಿಸಿದ ಸಿಪಿಐ ಬೀಳಗಿಯವರು ಜನಜಾಗೃತಿ ಮೂಡಿಸುವ ಕಾರ್ಯ ಮಾಡಿದ್ದಾರೆ. ಮಾರ್ಚ್ 1ರಿಂದ ಜನರು ಜಾಗೃತರಾಗಿರಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ನರೇಗಲ್ಲ ಪೊಲೀಸ್ ಠಾಣೆಯ ಎಎಸ್‌ಐ ಕೆ.ಆರ್. ಬೇಲೇರಿ, ಮಹಿಳಾ ಕಾನ್‌ಸ್ಟೇಬಲ್ ಎಸ್.ಆರ್. ನದಾಫ್, ಕಾನ್‌ಸ್ಟೇಬಲ್‌ಗಳಾದ ಕೆ.ವಿ. ಹಿರೇಮಠ, ಎಂ.ವೈ. ಉಪ್ಪಾರ, ವಿಜಯ ಗೋದಿಗನೂರ, ಆರ್.ಎಸ್. ಕಪ್ಪತ್ತನವರ, ಮುತ್ತು ಹಡಪದ ಮುಂತಾದವರು ಉಪಸ್ಥಿತರಿದ್ದರು.




ನಿಗದಿಯಾದ ದಂಡವನ್ನು ನಿಗದಿತ ಅವಧಿಯೊಳಗೆ ಕಟ್ಟದಿದ್ದರೆ, ಉದಾಸೀನ ಮಾಡಿದರೆ ವಾಹನವನ್ನು ಜಪ್ತ್ ಮಾಡಲಾಗುವುದು. ಮುಂದುವರೆದು ವಾಹನ ಚಾಲನೆ ಪರವಾನಿಗೆಯನ್ನೂ ರದ್ದು ಮಾಡಬಹುದು. ವಾಹನಗಳ ಮೇಲೆ 'ಥರ್ಡ್ ಐ' ಕೇಸ್‌ಗಳಿದ್ದರೆ ನಿಮ್ಮ ವಾಹನಗಳನ್ನು ಮಾರಾಟ ಮಾಡಲೂ ಸಾಧ್ಯವಾಗುವುದಿಲ್ಲ ಎಂದು ಪಿಎಸ್‌ಐ ಬನ್ನಿಕೊಪ್ಪ ತಿಳಿಸಿದರು.


ಗೆ,
SHRIDHAR PARADDI
A/P GUDI ONI WARD NO
02,D S HADAGALI TO RON,DIST
GADAG,KA,582101
Mobile No - 8495884415

ವಿಷಯ: ಸಂಚಾರ ನಿಯಮ ಉಲ್ಲಂಘನೆಯ ಬಗ್ಗೆ ನೋಟೀಸ್

ಗೌರವಾನ್ವಿತ ಮಹನಿಯರೆ/ಮಹಿಳೆಯರೆ,

| | | | |
|---|---|---|---|
| ನೋಟೀಸ್ ಸಂಖ್ಯೆ: | 000035131/24 | ನೋಟೀಸ್ ದಿನಾಂಕ: | 17/02/2024 |
| ವಾಹನ ಸಂಖ್ಯೆ: | KA26EC1279 | ಉಲ್ಲಂಘನೆಯ ಸ್ಥಳ: | Huilgol Road |
| ಉಲ್ಲಂಘನೆಯ ವಿವರ: | Triple Riding | ಕಲಂ: | Section 128 (1), MV Act R/W sec 177 MV Act |
| ವಾಹನದ ಮಾದರಿ: | Two Wheeler | ಉಲ್ಲಂಘನೆಯ ದಿನಾಂಕ: | 17-02-2024 |

## ಅಯೋಧ್ಯಾ ಯಾತ್ರಾರ್ಥಿಗಳಿಗೆ ಬೀಳ್ಕೊಡುಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಿಂದ ಅಯೋಧ್ಯೆ ದರ್ಶನಕ್ಕೆ 250 ಯಾತ್ರಾರ್ಥಿಗಳು ರೈಲಿನ ಮೂಲಕ ಪ್ರಯಾಣ ಬೆಳೆಸಿದರು. ಭಾರತೀಯ ಜನತಾ ಪಾರ್ಟಿ ರಾಜ್ಯ ಅಧ್ಯಕ್ಷರಾದ ಬಿ.ವಾಯ್. ವಿಜಯೇಂದ್ರ ಅವರು ಕರ್ನಾಟಕದ ಪ್ರತಿಯೊಂದು ಜಿಲ್ಲೆಯಿಂದ 250 ಜನರನ್ನು ಅಯೋಧ್ಯೆಯ ಶ್ರೀರಾಮ ದರ್ಶನಕ್ಕೆ ತೆರಳುವ ಯಾತ್ರಾರ್ಥಿಗಳಿಗೆ ಸಂಪೂರ್ಣ ವ್ಯವಸ್ಥೆ ಕಲ್ಪಿಸಿಕೊಟ್ಟಿರುವುದಕ್ಕಾಗಿ ಧನ್ಯವಾದ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಮಾಜಿ ಸಚಿವ ಕಳಕಪ್ಪ ಬಂಡಿ, ಶಾಸಕ ಡಾ. ಚಂದ್ರು ಲಮಾಣಿ, ಮುಖಂಡರಾದ ಉಮೇಶಗೌಡ ಪಾಟೀಲ, ಶಶಿಕಾಂತ ವಿಶ್ವಬ್ರಾಹ್ಮಣ, ಸಂಚಾಲಕ ಸಿದ್ರಾಮಪ್ಪ ಮೊರಬದ, ಸಹ ಸಂಚಾಲಕ ಸಂತೋಷ ಅಕ್ಕಿ ಹಾಗೂ ಗದಗ ನಗರದ ಬಿಜೆಪಿ ಪ್ರಮುಖರು, ಕಾರ್ಯಕರ್ತರು ಯಾತ್ರಾರ್ಥಿಗಳಿಗೆ ಶುಭ ಕೋರಿ ಬೀಳ್ಕೊಟ್ಟರು.

## 'ಥರ್ಡ್ ಐ' ಸಿಸಿ ಕ್ಯಾಮರಾ ಕಾರ್ಯಾರಂಭ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಮಾ.1ರಿಂದ ಪಟ್ಟಣದಲ್ಲಿ 'ಥರ್ಡ್ ಐ' ಸಿಸಿ ಕ್ಯಾಮರಾ ಕಾರ್ಯಾರಂಭ ಮಾಡಲಿದ್ದು, ಸಾರ್ವಜನಿಕರು ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸಬೇಕು ಎಂದು ರೋಣ ಸಿಪಿಐ ಎಸ್. ಎಸ್. ಬೀಳಗಿ ಹೇಳಿದರು.

ಸ್ಥಳೀಯ ಕಾಲಕಾಲೇಶ್ವರ ವೃತ್ತದಲ್ಲಿ ಗುರುವಾರ ಸಾರ್ವಜನಿಕರಿಗೆ ಸಂಚಾರಿ ನಿಯಮ ಹಾಗೂ ಥರ್ಡ್ ಐ ಸಿಸಿ ಕ್ಯಾಮರಾ ಕುರಿತು ಜಾಗೃತಿ ಮೂಡಿಸಿ ಅವರು ಮಾತನಾಡಿದರು.




ಸಂಚಾರಿ ನಿಯಮ ಪಾಲನೆಗಾಗಿ ಈಗಾಗಲೇ ಗದಗ ನಗರದಲ್ಲಿ ಥರ್ಡ್ ಐ ಕ್ಯಾಮರಾ ಅಳವಡಿಸಿದ್ದು, ಸಂಚಾರಿ ನಿಯಮ ಉಲ್ಲಂಘಿಸುವ ವಾಹನಗಳ ಮಾಲಿಕರ ಮನೆಗಳಿಗೆ ದಂಡದ ನೋಟಿಸ್ ಬರುತ್ತಿವೆ. ಅದರಂತೆ ಗಜೇಂದ್ರಗಡದ ಪ್ರಮುಖ ಸ್ಥಳಗಳಲ್ಲಿ ಥರ್ಡ್ ಐ ಸಿಸಿ ಕ್ಯಾಮರಾ ಅಳವಡಿಸಲಾಗಿದ್ದು ಮಾ.01ರಿಂದ ಕಾರ್ಯಾರಂಭ ಮಾಡಲಿವೆ. ಹೀಗಾಗಿ ಸಾರ್ವಜನಿಕರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವುದು, ಸೀಟ್ ಬೆಲ್ಟ್ ಹಾಕಿಕೊಳ್ಳುವುದು ಸೇರಿದಂತೆ ಸಂಚಾರಿ ನಿಯಮಗಳನ್ನು ಪಾಲಿಸುವುದರ ಮೂಲಕ ಸುರಕ್ಷಿತವಾಗಿ ಸಂಚಾರ ಮಾಡಿ, ದಂಡದಿಂದ ತಪ್ಪಿಸಿಕೊಳ್ಳಿ ಎಂದರು.

ಈ ವೇಳೆ ಪೊಲೀಸ್ ಇಲಾಖೆಯ ಉಮೇಶ ಲಮಾಣಿ, ಡಿ.ಎಂ. ಕಟ್ಟಿಮನಿ, ಸಂಗಮೇಶ ಹಲಬಾಗಿಲ, ಶಿವರಾಜ ಮಮಟಗೇರಿ ಮುಂತಾದವರಿದ್ದರು.

## ಹೆಜ್ಜೇನು ಗೂಡಿನತ್ತ ಗಮನಹರಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶವನ್ನು ಮಾರ್ಚ್ 2ರಂದು ರೋಣ ಪಟ್ಟಣದ ತಾಲೂಕಾ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದು, ಸಮಾವೇಶ ನಡೆಯಲಿರುವ ಸ್ಥಳದ ಬಳಿಯೇ ಹೆಜ್ಜೇನು ಗೂಡು ಕಟ್ಟಿದ್ದು ಅಧಿಕಾರಿಗಳು ಮಾತ್ರ ಚಿತ್ತ ಹರಿಸಿಲ್ಲ.



ಸಮಾವೇಶದ ಸ್ಥಳ ತಹಸೀಲ್ದಾರ್ ಕಚೇರಿಯ ಹಿಂಭಾಗದಲ್ಲಿದೆ. ಅಲ್ಲದೆ ತಹಸೀಲ್ದಾರ್ ಕಚೇರಿಯ ಕಟ್ಟಡದಲ್ಲಿಯೇ ಹೆಜ್ಜೇನು ಗೂಡು ಕಟ್ಟಿರುವುದು ಆತಂಕಕ್ಕೆ ಕಾರಣವಾಗಿದೆ. ಈ ಹಿಂದೆ ತಹಸೀಲ್ದಾರ್ ಕಚೇರಿಯ ಆವರಣದಲ್ಲಿ ಪ್ರತಿಭಟನೆ ನಡೆಸುತ್ತಿದ್ದ ಸಂದರ್ಭದಲ್ಲಿ ಹೆಜ್ಜೇನು ದಾಳಿ ನಡೆಸಿ ಹತ್ತುಕ್ಕೂ ಜನರು ಆಸ್ಪತ್ರೆ ಸೇರಿದ್ದರು. ಈಗ ಅದೇ ಸ್ಥಳದಲ್ಲಿ ಮತ್ತೆ ಹೆಜ್ಜೇನು ಗೂಡು ಕಟ್ಟಿದೆ.

ಗ್ಯಾರಂಟಿ ಸಮಾವೇಶಕ್ಕೆ ಎರಡೂ ತಾಲೂಕುಗಳಿಂದ ಸಾವಿರಾರು ಫಲಾನುಭವಿಗಳು ಆಗಮಿಸುವ ಹಿನ್ನೆಲೆಯಲ್ಲಿ ತಾಲೂಕಾಡಳಿತ ಈ ಬಗ್ಗೆ ಎಚ್ಚರಿಕೆ ವಹಿಸಿ, ಹೆಜ್ಜೇನು ಸ್ಥಳಾಂತರಿಸಲು ಅಧಿಕಾರಿಗಳು ಮುಂದಾಗಬೇಕಿದೆ.

## ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಗೆ ಸೋಲು: ಹತಾಶೆಯ ಆರೋಪ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯಸಭೆಯ ಚುನಾವಣೆಯ ಫಲಿತಾಂಶದ ನಂತರ ನಡೆದ ಸಂಭ್ರಮದಲ್ಲಿ ನಾಸಿರ್ ಸಾಬ್ ಜಿಂದಾಬಾದ್ ಎಂದು ಅಭಿಮಾನಿಗಳು ಕರೆದಿದ್ದು, ಅದನ್ನು ತಿರುಚಿ ಬಿಜೆಪಿಯವರು ಸುಳ್ಳು ಪ್ರಚಾರ ಮಾಡಿ ತಮ್ಮ ಸೋಲನ್ನು ಮುಚ್ಚುವ ಕೆಲಸ ಮಾಡುತ್ತಿದ್ದಾರೆ ಎಂದು ಯುವ ಕಾಂಗ್ರೆಸ್ ಮುಖಂಡ ಸೈಯದ್ ಖಾಲಿದ್ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರಕಾರದ ಐದು ಗ್ಯಾರಂಟಿಗಳಿಂದ ಜನರು, ರೈತರು ಖುಷಿಯಾಗಿದ್ದಾರೆ. ಇದನ್ನೆಲ್ಲಾ ಸಹಿಸದ ಬಿಜೆಪಿ- ಜೆಡಿಎಸ್ ಮೈತ್ರಿ, ದಿನನಿತ್ಯ ಜಾತಿ ರಾಜಕಾರಣ ಮಾಡುತ್ತಿದ್ದಾರೆಂದು ಸೈಯದ್ ಆರೋಪಿಸಿದ್ದಾರೆ. ಬರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಜನ ಎರಡೂ ಪಕ್ಷಗಳಿಗೆ ಪಾಠ ಕಲಿಸಲಿದ್ದಾರೆ ಎಂದು ಸೈಯದ್ ಖಾಲಿದ್ ಕೊಪ್ಪಳ ಹೇಳಿದ್ದಾರೆ.

## ಅಂಬಿಗ, ಸುಣಗಾರ ಸಮಾಜಕ್ಕೆ ಸೂಕ್ತ ಸ್ಥಾನ

■ವಿಜಯಸಾಕ್ಷಿ ಸುದ್ದಿ, ಗದಗ

ಅಂಬಿಗ, ಸುಣಗಾರ, ಬಾರಕೇರ ಸಮಾಜದ ಜನರಿಗೆ ಸೂಕ್ತ ಸ್ಥಾನ ನೀಡಿ, ಕಾಂಗ್ರೆಸ್ ಮುಖಂಡರಾದ ಮಾಲಾ ನಾರಾಯಣರಾವ್ ಅವರನ್ನು ಕರ್ನಾಟಕ ರಾಜ್ಯ ಮೀನುಗಾರಿಕೆ ಅಭಿವೃದ್ಧಿ ನಿಗಮಕ್ಕೆ ಅಧ್ಯಕ್ಷರಾಗಿ ಆಯ್ಕೆ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯರವರಿಗೆ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವುಕುಮಾರರಿಗೆ ಸಮಾಜ ಬಾಂಧವರ ಪರವಾಗಿ ಸಮಾಜ ಟ್ರಸ್ಟ್ ಜಿಲ್ಲಾಧ್ಯಕ್ಷ ರಾಮಣ್ಣ



ಇರಕಲ್ಲ ಸಮಾಜ ಬಾಂಧವರ ಪರವಾಗಿ ಧನ್ಯವಾದ ಸಲ್ಲಿಸಿದ್ದಾರೆ.

ಕಾಂಗ್ರೆಸ್ ಮೀನುಗಾರಿಕೆ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ ಅಭಿನಂದಿಸುತ್ತ, ಮೀನುಗಾರಿಕೆ ಸವಲತ್ತುಗಳು ಸಮಾಜದ ಬಡ ಕುಟುಂಬಗಳಿಗೆ ಸಿಗುವಂತಾಗಲಿ ಎಂದರು. ಅಂಬಿಗರ ಸಮಾಜದ ಪ್ರಧಾನ ಕಾರ್ಯದರ್ಶಿ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಮೀನುಗಾರಿಕೆ ವಿಭಾಗದ ಅಧ್ಯಕ್ಷ ಸಂಗಮೇಶ ಹಾದಿಮನಿ, ಉಪಾಧ್ಯಕ್ಷ ಪ್ರವೀಣ ನೀಲಣ್ಣವರ, ಶಿವದೇವ್ ಹಾದಿಮನಿ, ಹನಮಂತಪ್ಪ ಅಂಬಿಗೇರ, ರವಿಕುಮಾರ್ ಗುಡಿಸಾಗರ್, ಮಹಿಳಾ ಅಧ್ಯಕ್ಷರಾದ ಸುಜಾತ ಗುಡಿಸಾಗರ, ರಾಜು ಪೂಜಾರ ಶುಭ ಹಾರೈಸಿದ್ದಾರೆ.

## ಸರ್ಕಾರಿ ನೌಕರರಿಗಾಗಿ ಯೋಗಾಸನ ಸ್ಪರ್ಧೆ: ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಪ್ರತಿವರ್ಷ ರಾಜ್ಯ ಸರ್ಕಾರಿ ನೌಕರರಿಗಾಗಿ ನಡೆಸುವ ಕ್ರೀಡೆಗಳಲ್ಲಿ ಯೋಗಾಸನ ಕ್ರೀಡೆಯನ್ನು ಸೇರ್ಪಡೆ ಮಾಡಿದೆ. ಅಷ್ಟೇ ಅಲ್ಲದೇ ಇದೇ ವರ್ಷ (2023-24) ಪ್ರಥಮ ಬಾರಿಗೆ ರಾಜ್ಯ ಸರ್ಕಾರಿ ನೌಕರರಿಗಾಗಿ ಯೋಗಾಸನ ಸ್ಪರ್ಧೆಗಳನ್ನು ನಡೆಸುತ್ತಿರುವುದು ಸಂತೋಷ ಹಾಗೂ ಹೆಮ್ಮೆಯ ವಿಷಯವಾಗಿದೆ ಎಂದು ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಸಂತಸ ವ್ಯಕ್ತಪಡಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟದಲ್ಲಿ ಯೋಗಾಸನ ಕ್ರೀಡೆಯನ್ನು ನಡೆಸಲು ಸಹಕರಿಸಿದ, ಶ್ರಮವಹಿಸಿದ, ಆಯುಕ್ತರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬೆಂಗಳೂರು ಇವರಿಗೆ ಹಾಗೂ ಪ್ರಪ್ರಥಮ ಬಾರಿಗೆ ಗದಗ ಜಿಲ್ಲಾ ಮಟ್ಟದಲ್ಲಿ ಸರ್ಕಾರಿ ನೌಕರರಿಗಾಗಿ ಯೋಗಾಸನ ಸ್ಪರ್ಧೆಗಳನ್ನು ಆಯೋಜಿಸಿರುವ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಇವರೆಲ್ಲರಿಗೂ ಮತ್ತು ಗದಗ ಜಿಲ್ಲಾ ಯೋಗ ಒಕ್ಕೂಟ, ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ, ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಸಿದ್ಧಲಿಂಗ ನಗರ ಇವರೆಲ್ಲರಿಗೂ ಹಾಗೂ ಗದಗ ಯೋಗಾಸನ ಕ್ರೀಡಾಸಕ್ತರೆಲ್ಲರ ಪರವಾಗಿ ಅವರು ಹಾರ್ದಿಕ ಅಭಿನಂದನೆಗಳನ್ನು ತಿಳಿಸಿದ್ದಾರೆ.

## ಯೋಜನೆಗಳ ವಿತರಣೆಯಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದಿಂದ ಅಲ್ಪಸಂಖ್ಯಾತರ ಸಮುದಾಯಗಳ ಉದ್ಯೋಗ, ಶಿಕ್ಷಣ ಮತ್ತು ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ತಮ್ಮ ಬಜೆಟ್‌ನಲ್ಲಿ ನೂರಾರು ಕೋಟಿ ರೂ ಅನುದಾನ ಘೋಷಣೆ ಮಾಡಿದೆ. ಆದರೆ ಗದಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿಗಳು ಸರ್ಕಾರದ ಜನಪರ ಯೋಜನೆಗಳ ಮಾಹಿತಿಯನ್ನು ನೀಡದೇ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಸಮುದಾಯಗಳಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ. ಆರ್.ಮಾನ್ವಿ ಪ್ರಕಟಣೆಯ ಮೂಲಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಅಲ್ಪಸಂಖ್ಯಾತರ ಸಮುದಾಯದ ಜನರು ಮುಖ್ಯವಾಹಿನಿಗೆ ಬರುವ ನಿಟ್ಟಿನಲ್ಲಿ ಹಲವು ಜನಪರವಾದ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಆದರೆ ಗದಗ ಜಿಲ್ಲೆಯ ಅಲ್ಪಸಂಖ್ಯಾತ ಇಲಾಖೆ ಮತ್ತು ನಿಗಮದ ಅಧಿಕಾರಿಗಳು ಸರ್ಕಾರದ ಯೋಜನೆಗಳನ್ನು ವ್ಯಾಪಕವಾಗಿ ಪ್ರಚಾರ ಮಾಡದೇ ಕಾಟಾಚಾರಕ್ಕಾಗಿ ಕಚೇರಿಗಳಲ್ಲಿ ಮಾತ್ರ ಮಾಹಿತಿಯನ್ನು ನೀಡಿ ನಿಜವಾದ ಬಡ ಫಲಾನುಭವಿಗಳಿಗೆ ಯೋಜನೆಗಳನ್ನು ನೀಡುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ.

ಈ ವೈಫಲ್ಯಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಗೂ ನಿಮಗದ ಅಧಿಕಾರಿಗಳು ನೇರವಾಗಿ ಕಾರಣರಾಗಿದ್ದಾರೆ. ಇಂತಹ ಜನವಿರೋಧಿ ಅಧಿಕಾರಿಗಳ ವರ್ಗಾವಣೆಗೆ ಆಗ್ರಹಿಸಿ ಗದಗ ಜಿಲ್ಲಾ ಸ್ಲಂ ಸಮಿತಿ ಹಾಗೂ ಗದಗ ಜಿಲ್ಲಾ ಅಲ್ಪಸಂಖ್ಯಾತರ ಸೇವಾ ಸಂಘದ ನೇತೃತ್ವದಲ್ಲಿ ಮೌಲಾನಾ ಆಜಾದ ಕಟ್ಟಡದಲ್ಲಿರುವ ಇಲಾಖೆ ಕಚೇರಿಯ ಮುಂದೆ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಕರ್ನಾಟಕ ಸರಕಾರ (ರಾಷ್ಟ್ರೀಯ ಆರೋಗ್ಯ ಅಭಿಯಾನ)

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಗದಗ**
**ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ಗದಗ**
**ಫೋನ ನಂ. 9449843228**

ಕ್ರ.ಸಂ:ಜಿ.ಕಾ.ನಿ.ಘ.ಗ/ಎನ್.ಟಿ.ಈ.ಪಿ/ಲ್ಯಾ.ಇ.ಟೆ/290/2023-24

ದಿನಾಂಕ : 28.02.2024

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಗದಗ ಜಿಲ್ಲೆಯಲ್ಲಿ 2023-24ನೇ ಸಾಲಿಗೆ ಎನ್.ಹೆಚ್.ಎಂ ಯೋಜನೆಯಡಿಯಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ , ಗದಗ ಇಲ್ಲಿಗೆ ಅಗತ್ಯವಿರುವ ಪ್ರಯೋಗಶಾಲಾ ಸಾಮಗ್ರಿಗಳನ್ನು & ರಾಸಾಯನಿಕಗಳನ್ನು ಖರೀದಿಸಲು ಇ-ಪ್ರಕ್ಯೂರ್‌ಮೆಂಟ ಮೂಲಕ ಅಲ್ಪಾವಧಿ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಅಂದಾಜು ಮೊತ್ತ ರೂ. **14** ಲಕ್ಷಗಳು. ಇ.ಎಮ್.ಡಿ ಮೊತ್ತ ರೂ. **35,000/-** ಟೆಂಡರ್ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ : **28.02.2024** ರಿಂದ ದಿನಾಂಕ : **06.03.2024**ರ ಸಂಜೆ 05.20 ಗಂಟೆ ವರೆಗೆ. ತಾಂತ್ರಿಕ ಲಕೋಟಿ ತೆರೆಯುವ ದಿನಾಂಕ : **07.03.2024**ರ ಸಂಜೆ 05.30 ಗಂಟೆಗೆ. ಆರ್ಥಿಕ ಲಕೋಟಿ ತೆರೆಯುವ ದಿನಾಂಕ : **11.03.2024**ರ ಬೆಳಿಗ್ಗೆ 11.00 ಗಂಟೆಗೆ. ಹೆಚ್ಚಿನ ಮಾಹಿತಿಗಾಗಿ ಮೇಲ್ಕಂಡ ಕಚೇರಿ ಅಥವಾ ಇ-ಪ್ರಕ್ಯೂರ್‌ಮೆಂಟ ವೆಬ್‌ಸೈಟ್ **www.kppp.karnataka.gov.in** ಅಥವಾ **dtokagdg@rntcp.org** ಸಂಪರ್ಕಿಸಬಹುದಾಗಿದೆ.

ಸಹಿ/- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/594/2023-24

**Form - IV**
**(See rule 8)**
Statement Showing the Ownership of
**VIJAYASAKSHI** KANNADA DAILY NEWS PAPER
1) Place of publication : GADAG
Printed at Sai Printing Press and publishers, H.No. 130/154, Balaji nagar, Gadag. Published at **Vijaya Sakshi,** Near Ring Road, Gadag-582103

2) Periodicitiy of publication: Daily (Kannada)
3) Printer's Name : **Hussainsab M. Shareefanavar**
(Whether citizen of india)
YES
Address : H.No. 130/154, Balaji nagar, Near Ring Road, Gadag. (Karnataka)
4) Publisher's Name : **Hussainsab M. Shareefanavar**
(Whether citizen of india)
YES
Address : H.No. 130/154, Balaji nagar, Near Ring Road, Gadag. (Karnataka)
5) Editor's Name : **Hussainsab M. Shareefanavar**
(Whether citizen of india)
YES
Address : H.No. 130/154, Balaji nagar, Near Ring Road, Gadag. (Karnataka)
6) Name and address of : **Hussainsab M. Shareefanavar** individual who own the newspaper or printers or in individual Capacity shareholder holding more (Sole Proprietor) than one percent of the H.No. 130/154, Balaji nagar, Near Ring Road, Gadag. total capital (Karnataka)
I **Hussainsab M. Shareefanavar** hereby declare that the particulars given above are true to the best of my knowledge and belief.
28-02-2024
**Hussainsab M. Shareefanavar**
Signature of the Publisher